ಸಂಪುಟ : 10 ಸಂಚಿಕೆ: 210 ಪುಟ : 4+2 ಬೆಲೆ: 3.00 ರವಿವಾರ ಸೆಪ್ಟೆಂಬರ್ 28 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 210 Pages : 4+2 Price : 3.00 Sunday September 28 2025 Gadag RNI No:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಉಪನ್ಯಾಸ ಕಾರ್ಯಕ್ರಮ ಇಂದು



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಸೆ. 28ರಂದು ಬೆಳಿಗ್ಗೆ 10ಕ್ಕೆ ನಡೆಯಲಿರುವ ಬಸವದಳದ 1665ನೇ ಶರಣ ಸರಮದಲ್ಲಿ 'ಲಿಂಗಾಯತ ಸ್ವತಂತ್ರ ಧರ್ಮ-ಒಂದು ಚಿಂತನೆ' ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ, ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಉಪನ್ಯಾಸಕಿ, ಶರಣೆ ಡಾ. ಗಿರಿಜಾ ಹಸಬಿ ಉಪನ್ಯಾಸ ಮಾಡುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

### ಸಾರಿಗೆ ಇಲಾಖೆ ಇಷ್ಟು ಬಡುವಾಯ್ತಾ? ಆಯುಧ ಪೂಜೆಗೆಂದು ಒಂದು ಬಸ್ ಗೆ ಕೊಟ್ಟ ಹಣ ಇಷ್ಟೇನಾ?

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಆಯುಧ ಪೂಜೆಗೆ ಇನ್ನೇನೂ ಕೆಲವೇ ದಿನಗಳು ಬಾಕಿ ಇದ್ದು, ಸರ್ಕಾರಿ ಬಸ್‌ಗಳಿಗೆ ಪೂಜೆ ಸಲ್ಲಿಸಲು ಸಾರಿಗೆ ಇಲಾಖೆಯಿಂದ ಹಣ ಬಿಡುಗಡೆ ಮಾಡಲಾಗಿದೆ.

ಅದರಂತೆ ಪ್ರತಿ ಬಸ್‌ಗೆ ಕೇವಲ 150 ರೂ. ರಿಲೀಸ್ ಮಾಡಿದೆ. ಪ್ರತಿ ವರ್ಷ ದಸರಾ ಹಿನ್ನೆಲೆಯಲ್ಲಿ ಆಯುಧ ಪೂಜೆ ಹಬ್ಬದಲ್ಲಿ ಸಾರಿಗೆ ಬಸ್‌ಗಳಿಗೆ ಪೂಜೆ ಸಲ್ಲಿಸಲಾಗುತ್ತದೆ. ಅದಕ್ಕಾಗಿ ಸಾರಿಗೆ ಇಲಾಖೆಯು ಪ್ರತಿ ಬಸ್, ಇಲಾಖಾ ವಾಹನಕ್ಕೆ ಹಣ ಬಿಡುಗಡೆ ಮಾಡಲಿದೆ. ಈ ಬಾರಿ ಕೇವಲ 150 ರೂ. ಬಿಡುಗಡೆ ಮಾಡಿದೆ. ಇದಕ್ಕೆ ಸಿಬ್ಬಂದಿ ಅಸಮಾಧಾನ ಹೊರಹಾಕಿದ್ದಾರೆ.

ಹಬ್ಬದ ದಿನಗಳಲ್ಲಿ ಹೂ-ಹಣ್ಣು, ಹಾರ ಎಲ್ಲದರ ಬೆಲೆಯೂ ಏರಿಕೆ ಆಗುವುದು ಸಾಮಾನ್ಯ. ಒಂದು ಮಾರು ಹೂವಿನ ಹಾರವೇ ಹಬ್ಬದಲ್ಲಿ 100 ರೂ. ದಾಟಲಿದೆ. ಕೇವಲ 150 ರೂಪಾಯಿಯಲ್ಲಿ ಒಂದು ವಾಹನಕ್ಕೆ ಪೂಜೆ ಮಾಡಲು ಸಾಧ್ಯವೇ ಎಂಬ ಪ್ರಶ್ನೆ ವ್ಯಕ್ತವಾಗಿದೆ. ಸಿಬ್ಬಂದಿಯೇ ಹಣ ಹಾಕಿ ಹಬ್ಬ ಮಾಡುವ ಸ್ಥಿತಿ ನಿರ್ಮಾಣವಾಗಿದೆ ಎನ್ನಲಾಗಿದೆ.

### ನಟ ವಿಜಯ್ ರ್‍ಯಾಲಿಯಲ್ಲಿ ಭೀಕರ ಕಾಲ್ತುಳಿತ: 31 ಜನ ಸಾವು, ಹಲವರು ಗಂಭೀರ

■ ವಿಜಯಸಾಕ್ಷಿ ಸುದ್ದಿ, ಚೆನ್ನೈ

ತಮಿಳು ನಟ ವಿಜಯ್ ನೇತೃತ್ವದ ಬೃಹತ್ ರ್‍ಯಾಲಿಯಲ್ಲಿ ಭೀಕರ ಕಾಲ್ತುಳಿತ ಸಂಭವಿಸಿ 31 ಜನ ಸಾವನ್ನಪ್ಪಿರುವ ಘಟನೆ ತಮಿಳುನಾಡಿನ ಕರೂರಿನಲ್ಲಿ ಜರುಗಿದೆ.

2026ರ ವಿಧಾನಸಭೆ ಚುನಾವಣೆ ಹಿನ್ನೆಲೆಯಲ್ಲಿ ನಟ - ರಾಜಕಾರಣಿ ವಿಜಯ್ ತಮಿಳುನಾಡು ಪ್ರವಾಸ ನಡೆಸುತ್ತಿದ್ದು, ಕರೂರ್‌ನಲ್ಲಿ ಶನಿವಾರ ನಡೆದ ರ್‍ಯಾಲಿಯಲ್ಲಿ ಭೀಕರ ದುರಂತ ಸಂಭವಿಸಿದೆ. ಕಾಲ್ತುಳಿತದಲ್ಲಿ ಸುಮಾರು 31 ಮಂದಿ ಸಾವನ್ನಪ್ಪಿದ್ದಾರೆ ಎನ್ನಲಾಗಿದೆ.

ಮೃತಪಟ್ಟ ವಯಸ್ಕರೆಲ್ಲರೂ ವಿಜಯ್ ಅವರ ರಾಜಕೀಯ ಪಕ್ಷವಾದ 'ತಮಿಳಗ ವೆಟ್ರಿ ಕಳಗಂ' (ಟಿವಿಕೆ) ಬೆಂಬಲಿಗರಾಗಿದ್ದರು. ವರದಿಗಳ ಪ್ರಕಾರ, ಸಾವಿರಾರು ಸಂಖ್ಯೆಯಲ್ಲಿ ಸೇರಿದ್ದ ಬೆಂಬಲಿಗರು, ತಮ್ಮ ನಾಯಕನಿಗಾಗಿ ಸುಮಾರು ಆರು ಗಂಟೆಗಳಿಗೂ ಹೆಚ್ಚು ಕಾಲ ಕಾದು ಕುಳಿತಿದ್ದರು.

### ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ-ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ 'ವಿಶ್ವ ಪ್ರವಾಸೋದ್ಯಮ ದಿನ' ಆಚರಣೆ

# ದೇಶ ಸುತ್ತುವುದರಿಂದ ಬದುಕಿನಲ್ಲಿ ಬದಲಾವಣೆ ಸಾಧ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ನೆಲ ಐತಿಹಾಸಿಕ ಪ್ರವಾಸಿ ತಾಣವಾಗಿದೆ. ಇಲ್ಲಿಂದ 20 ಕಿ.ಮೀ ಸುತ್ತಲೂ ವಿಶ್ವ ಪಾರಂಪರಿಕ ಸ್ಥಳವಾಗಲು ಅರ್ಹತೆ ಪಡೆದ ಸ್ಥಳಗಳಾಗಿವೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಹೇಳಿದರು.

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಪ್ರವಾಸೋದ್ಯಮ ಇಲಾಖೆ, ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವ ವಿದ್ಯಾಲಯ ಇವರುಗಳ ಸಹಯೋಗದಲ್ಲಿ ವಿವಿ ಕೌಸಲ್ಯ ವಿಕಾಸ ಭವನದಲ್ಲಿ ಶನಿವಾರ ನಡೆದ ವಿಶ್ವ ಪ್ರವಾಸೋದ್ಯಮ ದಿನ-2025 ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹತ್ತಿರದ ಲಕ್ಕುಂಡಿಯಲ್ಲಿ ತಲಾ 101 ಬಾವಿ, ದೇವಸ್ಥಾನಗಳಿವೆ. ವಿಶಾಲವಾದ ಕೆರೆ, ದೊಡ್ಡಬಸಪ್ಪನ ದೇವಾಲಯದ ಶೈಲಿ ಡಂಬಳದಲ್ಲಿದೆ. ಪ್ರಾಚೀನವಾದ ದೇವಾಲಯ, ಪರಿಸರ, ಸೌಹಾರ್ದಯುತ ಬದುಕು ಮುಳಗುಂದದಲ್ಲಿ ಸಿಗುತ್ತವೆ. ಗದಗ ತಾಲೂಕು ಸೇರಿದಂತೆ ಜಿಲ್ಲೆಯ ಸೂಡಿ, ಕೋಟುಮುಚಗಿ, ಗಜೇಂದ್ರಗಡ, ನರಗುಂದ ಇವೆಲ್ಲವೂ ಪ್ರವಾಸಿ



ತಾಣಗಳಾಗಿವೆ. ಇವೆಲ್ಲವುಗಳು ಗದಗ ಜಿಲ್ಲೆಯಲ್ಲಿರುವುದು ನಮಗೆಲ್ಲ ಹೆಮ್ಮೆ ಎಂದರು.

ಲಕ್ಕುಂಡಿಯಲ್ಲಿ ಈಗಾಗಲೇ ಉತ್ಖನನ ಪ್ರಾರಂಭ ಮಾಡಲಾಗಿದೆ. ಒಂದೇ ದಿನದಲ್ಲಿ 1,100 ಪ್ರಾಚ್ಯಾವಶೇಷಗಳನ್ನು ಸಂಗ್ರಹ ಮಾಡಲಾಗಿದೆ. ನಮ್ಮ ಸುತ್ತ-ಮುತ್ತ ಐತಿಹಾಸಿಕ ಪ್ರಾಚ್ಯಾವಶೇಷ ಸಂಪತ್ತು ಇದೆ. ಇದರ ಬಗ್ಗೆ ವಿಶೇಷ ಅಭಿಮಾನ ಇದೆ. ವಿದೇಶಕ್ಕೆ ಹೋಲಿಕೆ ಮಾಡಿದರೆ ಭಾರತದಲ್ಲಿ ಅತೀ ಹೆಚ್ಚು ಪ್ರವಾಸಿ ತಾಣಗಳಿವೆ ಎಂದರು.

ಕರ್ನಾಟಕದ ಕಾಸರಗೋಡದಿಂದ ಕಾರವಾರದವರೆಗೆ ಅಂದಾಜು 320 ಕಿ.ಮೀ ಸುಂದರ ಪ್ರವಾಸಿ ತಾಣವಾಗಿದೆ. ಪ್ರವಾಸೋದ್ಯಮ ಐಷಾರಾಮಿ ಜನರ ಖುಷಿಯ ಉದ್ಯಮ ಅಲ್ಲ. ಪ್ರವಾಸೋದ್ಯಮ ಜನರ ಮನಸ್ಸಿನಲ್ಲಿ ಬದಲಾವಣೆ ತರವುದಾಗಿದೆ. ಕೋಶ ಓದಬೇಕು, ದೇಶ ಸುತ್ತಬೇಕು ಎನ್ನುವ ಗಾದೆ ಇದೆ. ದೇಶ ಸುತ್ತುವುದರಿಂದ ಬದುಕಿನಲ್ಲಿ ಬದಲಾವಣೆ ಆಗಲು ಸಾಧ್ಯವಾಗುತ್ತದೆ ಎಂದು ಎಚ್.ಕೆ. ಪಾಟೀಲ ನುಡಿದರು.

ಭಾರತ ಪ್ರವಾಸೋದ್ಯಮ ಕ್ಷೇತ್ರದಲ್ಲಿ ವಿಶ್ವದಲ್ಲೇ ಮೊದಲ ಸ್ಥಾನದಲ್ಲಿ ನಿಲ್ಲುತ್ತದೆ. ವಿದೇಶದಲ್ಲಿ ಜೋಗ ಜಲಪಾತ, ಶರಾವತಿ ಜಲಪಾತ, ಲಕ್ಕುಂಡಿಯ ಬಸ್ತಿ, ಬಾದಾಮಿ, ಐಹೊಳೆಯಲ್ಲಿರುವ ಐತಿಹಾಸಿಕ ದೇವಸ್ಥಾನಗಳು ಕಾಣಸಿಗುವುದಿಲ್ಲ. ಜಿಲ್ಲೆಯ 48 ತಾಣ ಸೇರಿ ರಾಜ್ಯದ 1200 ತಾಣಗಳನ್ನು ಒಳಗೊಂಡು ರಾಷ್ಟ್ರ ಮಟ್ಟದಲ್ಲಿ ಮೂರನೇ ಸ್ಥಾನದಲ್ಲಿದೆ. ಬಿಂಕದಕಟ್ಟಿ ಪ್ರಾಣಿ ಸಂಗ್ರಹಾಲಯ ರಾಜ್ಯದಲ್ಲಿ 2ನೇ ಸ್ಥಾನದಲ್ಲಿದೆ.

> ರಾಜ್ಯ ಸರ್ಕಾರದಿಂದ 1,200 ಪ್ರವಾಸಿ ತಾಣಗಳನ್ನು ಗುರುತಿಸಲಾಗಿದೆ. ಅದರಲ್ಲಿ 48 ತಾಣಗಳು ಗದಗ ಜಿಲ್ಲೆಯಲ್ಲಿವೆ ಎನ್ನುವುದು ನಮ್ಮ ಹೆಮ್ಮೆಯಾಗಿದೆ. ಕಪ್ಪತ್ತಗುಡ್ಡ, ಪ್ರಾಣಿ ಸಂಗ್ರಹಾಲಯ ಸೇರಿದಂತೆ ಹಲವಾರು ಪ್ರದೇಶಗಳು ಪ್ರವಾಸಿಗರನ್ನು ಆಕರ್ಷಿಸುತ್ತವೆ. ಕೆಲವೇ ತಿಂಗಳಲ್ಲಿ ಯುನೆಸ್ಕೊದಿಂದ ಲಕ್ಕುಂಡಿ ಐತಿಹಾಸಿಕ ವಿಶ್ವ ಪಾರಂಪರಿಕ ಸ್ಥಳವೆಂದು ಗುರುತಿಸುವ ಕಾಲ ಬರಲಿದೆ ಎಂದು ಸಚಿವ ಎಚ್. ಕೆ. ಪಾಟೀಲರು ವಿಶ್ವಾಸ ವ್ಯಕ್ತ ಪಡಿಸಿದರು.

ಮುಂದಿನ ದಿನಗಳಲ್ಲಿ ರಾತ್ರಿ ವೇಳೆ ವೀಕ್ಷಿಸಲು ಅವಕಾಶ ಕಲ್ಪಿಸಿಕೊಡಲಾಗುವುದೆಂದು ಸಚಿವರು ತಿಳಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಸಿದ್ದು ಪಾಟೀಲ, ಪ್ರಭು ಬುರಬುರೆ, ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಸುರೇಶ ನಾಡಗೌಡರ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ಅಧೀಕ್ಷಕ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಡಾ. ಶರಣು ಗೋಗೇರಿ, ಗಂಗಪ್ಪ ಎಂ, ಕೊಟ್ರೇಶ್ ವಿಭೂತಿ, ಪ್ರಶಾಂತ್ ಜೆ.ಸಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಎಸ್‌ಎಸ್‌ಕೆ ನಮ್ಮೂರ ದಸರಾ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅಭಿಮತ

# ನವರಾತ್ರಿ ಉತ್ಸವ ಕಣ್ತುಂಬಿಕೊಳ್ಳುವುದೇ ಪುಣ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದಲ್ಲಿ ಎಸ್‌ಎಸ್‌ಕೆ ಸಮಾಜದಿಂದ ಆಚರಿಸುತ್ತಿರುವ ದಸರಾ ಉತ್ಸವದ ಸಂಭ್ರಮ ನೋಡಿ ಸಂತಸವಾಗಿದೆ. 150 ವರ್ಷಗಳ ಇತಿಹಾಸ ಹೊಂದಿರುವ ಜಗದಂಬಾ ದೇವಸ್ಥಾನದಲ್ಲಿ ನವರಾತ್ರಿ ಉತ್ಸವವನ್ನು ಕಣ್ತುಂಬಿಕೊಂಡಿರುವುದು ಪೂರ್ವಜನ್ಮದ ಪುಣ್ಯ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಹೇಳಿದರು.

ನಗರದ ಹಳೇ ಸರಾಫ್ ಬಜಾರದ ಶ್ರೀ ಜಗದಂಬಾ ದೇವಸ್ಥಾನದ ಸಹಸ್ರಾರ್ಜುನ ಸಮುದಾಯ ಭವನದ ಬಾಸ್ಕರಸಾ ಪವಾರ ಸಭಾಂಗಣದ ದಸರಾ ದರ್ಬಾರ್ ವೇದಿಕೆಯಲ್ಲಿ ಜರುಗಿದ ನಮ್ಮೂರ ದಸರಾ-2025ರ 5ಯ ದಿನದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಎಸ್‌ಎಸ್‌ಕೆ ಸಮಾಜದ ಪಂಚ ಕಮಿಟಿ ಅಧ್ಯಕ್ಷ ಫಕೀರಸಾ ಬಾಂಡಗೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯ ಮೇಲೆ ಗಣ್ಯ ಉದ್ಯಮಿ ಲಕ್ಷ್ಮೇಶ್ವರದ ಆನಂದಸ್ವಾಮಿ ಜಿ.ಗಡ್ಡದೇವರಮಠ, ಎಸ್‌ಎಸ್‌ಕೆ ಸಮಾಜದ ಮಾಜಿ ಅಧ್ಯಕ್ಷ ಪ್ರಭು ಬುರಬುರೆ, ಮಾಜಿ ಪಂಚರಾದ ಆರ್.ಕೆ. ಹಬೀಬ(ಬುಡ್ಡಣ್ಣ), ಉಪಾಧ್ಯಕ್ಷ ರಾಜು ಬದಿ, ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ, ದಸರಾ ಕಮಿಟಿ ಚೇರಮನ್ ಅನಿಲ್ ಖಟವಟೆ ಉಪಸ್ಥಿತರಿದ್ದರು.



ನಗರ ಪೊಲೀಸ್ ಠಾಣೆಯ ಸಿಪಿಐ ಡಿ.ಬಿ. ಪಾಟೀಲ, ಪಿಎಸ್‌ಐ ರೇಣುಕಾ ಮುಂಡೇವಾಡಿ, ಪಂಚ ಕಮಿಟಿ ಸದಸ್ಯರಾದ ಸುರೇಶಕುಮಾರ ಬದಿ, ಬಲರಾಮ ಬಸವಾ, ಪರಶುರಾಮ ಬದಿ, ವಿಷ್ಣುಸಾ ಶಿದ್ಲಿಂಗ, ಮಾರುತಿ ಪವಾರ, ಪ್ರಕಾಶ ಬಾಕಳೆ, ಅಂಬಾಸಾ ಖಟವಟೆ, ಗಂಗಾಧರ ಹಬೀಬ, ಗಣಪತಿ ಜಿತೂರಿ, ವಿನೋದ ಬಾಂಡಗೆ, ತರುಣ ಸಂಘದ ವಿಶ್ವನಾಥಸಾ ಸೋಳಂಕಿ, ರಾಘು ಬಾರಡ, ಶ್ರೀಕಾಂತ ಬಾಕಳೆ, ಗೋಪಾಲ ನಾಕೋಡ, ಸುಧೀರ ಕಾಟಿಗರ, ಅಶೋಕ ಬೇವಿನಕಟ್ಟಿ, ಮಾಧು ಬದಿ, ನಾಗರಾಜ ಖೋಡೆ, ಮಹಿಳಾ ಮಂಡಳದ ಅಧ್ಯಕ್ಷೆ ಉಮಾಬಾಯಿ ಬೇವಿನಕಟ್ಟಿ, ಗೀತಾಬಾಯಿ ಹಬೀಬ ಮುಂತಾದವರು ಉಪಸ್ಥಿತರಿದ್ದರು.

ರವಿ ಶಿದ್ಲಿಂಗ ಸ್ವಾಗತಿಸಿದರು. ಜಿ.ಎನ್. ಹಬೀಬ ನಿರೂಪಿಸಿದರು. ಬಲರಾಮ ಬಸವಾ ವಂದಿಸಿದರು.

> ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ ಅವರು ಮಾತನಾಡಿ, ನಮ್ಮಲ್ಲಿರುವ ದುಷ್ಟಶಕ್ತಿಗಳನ್ನು ದೂರ ಮಾಡಲು ನವರಾತ್ರಿ ಉತ್ಸವ ಆಚರಣೆ ಮುಖ್ಯವಾಗಿದೆ. ಈ ಹಬ್ಬದಲ್ಲಿ ಪೂಜೆ ಮತ್ತು ಪ್ರಾರ್ಥನೆ ಮಾಡುವ ಮೂಲಕ ನಮ್ಮಲ್ಲಿ ಉತ್ತಮ ಗುಣಗಳನ್ನು ಅಳವಡಿಸಿಕೊಳ್ಳಬೇಕು. ದಸರಾ ಉತ್ಸವದ ಸಂದರ್ಭದಲ್ಲಿ ಈ ದೇವಸ್ಥಾನದ ಕಾರ್ಯಕ್ರಮದಲ್ಲಿ ನಾನು ಕೂಡಾ ಪಾಲ್ಗೊಂಡಿರುವುದು ನನ್ನ ಪುಣ್ಯ ಎಂದು ಭಾವಿಸುತ್ತೇನೆ ಎಂದು ಹೇಳಿದರು.

## ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಗದಗ ಲೋಕೋಪಯೋಗಿ ಇಲಾಖೆ ಉಪ ವಿಭಾಗ, 5054 ರಾಜ್ಯ ಹೆದ್ದಾರಿ ರಸ್ತೆ ಸೇತುವೆ ಸೇರಿದಂತೆ ಕುರ್ತಕೋಟಿ, ಅಂತೂರ, ಬೆಂತೂರ, ಚಿಂಚಲಿ, ಹರ್ತಿ ಗ್ರಾಮಗಳಲ್ಲಿ ವಿವಿಧ ಕಾಮಗಾರಿಗಳಿಗೆ ಭೂಮಿಪೂಜೆಯನ್ನು ಕಾನೂನು, ಪ್ರವಾಸೋದ್ಯಮ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ನೆರವೇರಿಸಿದರು.

ಈ ಸಂದರ್ಭದಲ್ಲಿ ಕುರ್ತಕೋಟಿ ಗ್ರಾ.ಪಂ ಅಧ್ಯಕ್ಷ ಅಪ್ಪಣ್ಣಾ ಇನಾಮತಿ, ಪುಷ್ಪಾ ನಾಗಾವಿ, ಸಿದ್ದಲಿಂಗೇಶ ಪಾಟೀಲ, ಕುಮಾರ ಪುಜಾರ, ಮಲ್ಲಯ್ಯ ಕೊರವಣ್ಣನವರ, ಉಮೇಶ ನಾಯಕ, ಕೋಟ್ರೇಶ ವಿಭೂತಿ, ಕೆ.ಎಸ್. ಹಾದಿಮನಿ, ಎಂ.ಎಸ್. ಪಾಟೀಲ್, ಕಿರಣ ಕಿರೇಸೂರ, ರಮೇಶ ರಂಗಪ್ಪನವರ, ವಿಜಯ ಪೂಜಾರ, ಜಿ.ಆರ್. ಕತ್ತಿ, ಎಸ್.ಎನ್. ಕತ್ತಿ, ಶಿವಲಿಂಗಪ್ಪ ಬಾಲರೆಡ್ಡಿ, ಹೇಮಣ್ಣಾ ಬಾಲರೆಡ್ಡಿ, ಪಕ್ಕೀರೇಶ ಹಿರೇಮನಿ, ಮಹೇಶ ಪಟ್ಟಣಶೆಟ್ಟಿ, ಬಿ.ಟಿ. ಸೋಮರೆಡ್ಡಿ ಮುಂತಾದವರು ಇದ್ದರು.



ಗದಗ: ನವರಾತ್ರಿ ನವವರ್ಣದ ಸಂಭ್ರಮದಲ್ಲಿ ಗದುಗಿನ ನ್ಯಾಯಾಲಯದ ಸಿಬ್ಬಂದಿ ವರ್ಗ ಕುಷಾಂಡ ದೇವಿಯ ಹಳದಿ ಸೀರೆಯನ್ನುಟ್ಟು ಸಂಭ್ರಮಿಸಿದರು.



ಗದಗ: ದಸರಾ ಹಬ್ಬದ ಸಂಭ್ರಮದ ಅಂಗವಾಗಿ ಇಲ್ಲಿನ ಮುಳಗುಂದ ರಸ್ತೆಯ ಸಿದ್ದಗಂಗಾ ನಗರದ ದುರ್ಗಾಪರಮೇಶ್ವರಿ ಮಹಿಳಾ ಗ್ರೂಪ್‌ನ ಸದಸ್ಯರು ಐದನೇ ದಿನದಂದು ಹಸಿರು ವರ್ಣದ ಸೀರೆಯನ್ನುಟ್ಟು ಸಂಭ್ರಮಿಸಿದರು.

## ಪ್ರೊ. ಸಿ.ಎನ್.ಆರ್. ರಾವ್ ದಂಪತಿಗಳಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಭಾರತ ಕಂಡ ಅದ್ಭುತ ವಿಜ್ಞಾನಿ ಸಿ.ಎನ್.ಆರ್. ರಾವ್ ಅವರ ಬೆಂಗಳೂರು ನಿವಾಸದಲ್ಲಿ ಶಾಸಕ ಜಿ.ಎಸ್. ಪಾಟೀಲರು ಸಿ.ಎನ್. ಆರ್. ರಾವ್ ದಂಪತಿಗಳನ್ನು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕರು, ಭಾರತದ ಖ್ಯಾತ ರಸಾಯನಶಾಸ್ತ್ರಜ್ಞರು ಹಾಗೂ ವಸ್ತು ವಿಜ್ಞಾನ ಕ್ಷೇತ್ರದ ಪಂಡಿತರಾದ ಪ್ರೊ. ಸಿ.ಎನ್.ಆರ್. ರಾವ್ ಅವರು ವಿಜ್ಞಾನ ಲೋಕದಲ್ಲಿ ಅಸಾಧಾರಣ ಸಾಧನೆಗಳನ್ನು ಮಾಡಿದ್ದಾರೆ. ಅವರು ಭಾರತೀಯ ವಿಜ್ಞಾನ ಕ್ಷೇತ್ರದ ಬೆಳವಣಿಗೆಗೆ ಶ್ರಮಿಸಿದ್ದು, ವಿಶೇಷವಾಗಿ ನ್ಯಾನೋ ವಿಜ್ಞಾನ, ರಸಾಯನಶಾಸ್ತ್ರ ಮತ್ತು ವಸ್ತು ವಿಜ್ಞಾನದಲ್ಲಿ ಹೊಸ ದಾರಿಗಳನ್ನು ತೆರೆದಿದ್ದಾರೆ. 60ಕ್ಕೂ ಹೆಚ್ಚು ಪುಸ್ತಕಗಳು, 1800ಕ್ಕೂ ಹೆಚ್ಚು ಸಂಶೋಧನಾ ಲೇಖನಗಳನ್ನು ರಚಿಸಿರುವ ಅವರು ಯುವ ವಿಜ್ಞಾನಿಗಳಿಗೆ ಪ್ರೇರಣೆಯಾಗಿದ್ದಾರೆ ಎಂದರು.

ಪ್ರೊ. ಸಿ.ಎನ್.ಆರ್. ರಾವ್ ಅವರ ಶ್ರೇಷ್ಠ ವಿಜ್ಞಾನ ಸೇವೆಗಳನ್ನು ಗುರುತಿಸಿ ನಮ್ಮ ಕುಟುಂಬದಿಂದ ವಿಶೇಷವಾಗಿ ಅವರನ್ನು ಸನ್ಮಾನಿಸಲು ಹೆಮ್ಮೆಯೆನಿಸುತ್ತದೆ. ಅವರ ಸಾಧನೆಗಳು ಭವಿಷ್ಯದ ಯುವಕರಿಗೆ ಪ್ರೇರಣೆ ನೀಡಲಿ ಎಂಬುದು ನಮ್ಮ ಆಶಯವಾಗಿದೆ ಎಂದರು.

## ಸಾಕ್ಷಿ ಸುಭಾಷಿತ

ನೀವು ಯಶಸ್ಸನ್ನು ಪಡೆಯಲು ದೃಢ ಪ್ರಯತ್ನಬೇಕು. ಅಪಾರ ಇಚ್ಛಾಶಕ್ತಿ ಬೇಕು. 'ನಾನು ಸಮುದ್ರವನ್ನೇ ಪಾನಮಾಡುತ್ತೇನೆ' ಎಂದು ಪ್ರಯತ್ನಶೀಲನು ಹೇಳುತ್ತಾನೆ. 'ನನ್ನ ಸಂಕಲ್ಪದ ಮುಂದೆ ಪರ್ವತಗಳೇ ಪುಡಿಪುಡಿ ಯಾಗುತ್ತವೆ' ಎನ್ನುತ್ತಾನವನು. ಇಂತಹ ಶಕ್ತಿಯನ್ನೂ, ಖ್ಯಾತಿಯನ್ನೂ ಪಡೆಯಿರಿ : ಕಷ್ಟಪಟ್ಟು ದುಡಿಯಿರಿ. ನೀವು ಗುರಿ ಸೇರುವುದು ನಿಶ್ಚಯ.

– ಸ್ವಾಮಿ ವಿವೇಕಾನಂದ.

## ಸಂಪಾದಕೀಯ

### ಹಿಂದುಳಿದ ವರ್ಗಗಳ ಆಯೋಗದ ಸಮೀಕ್ಷೆ ಮತ್ತು ಸಾಮಾಜಿಕ ಜವಾಬ್ದಾರಿ

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ರಾಜ್ಯದ ಪ್ರಮುಖ ಸಮೀಕ್ಷೆಯಲ್ಲಿ ಭಾಗವಹಿಸುವಿಕೆ ಜನರ ಅಥವಾ ಕುಟುಂಬಗಳ ಸ್ವಯಂ ಇಚ್ಛೆಗೆ ಬಿಟ್ಟದ್ದು ಮತ್ತು ಮಾಹಿತಿ ನೀಡುವಂತೆ ಒತ್ತಾಯ ಮಾಡುತ್ತಿಲ್ಲ ಎಂದು ಸ್ಪಷ್ಟಪಡಿಸಿರುವುದು ಪ್ರಜಾಪ್ರಭುತ್ವದ ಆಶಯಗಳಿಗೆ ನೀಡಿದ ಗೌರವವಾಗಿದೆ.

ಈ ಸ್ಪಷ್ಟೀಕರಣವು, ಸೂಕ್ಷ್ಮ ಮಾಹಿತಿಗಳ ಸಂಗ್ರಹದ ಸಂದರ್ಭದಲ್ಲಿ ನಾಗರಿಕರ ಗೌಪ್ಯತೆ ಮತ್ತು ಸ್ವಾತಂತ್ರ್ಯಕ್ಕೆ ಆಯೋಗವು ಮನ್ನಣೆ ನೀಡಿದೆ ಎಂಬುದನ್ನು ಸೂಚಿಸುತ್ತದೆ.

ಯಾವುದೇ ಸಾಮಾಜಿಕ ಸಮೀಕ್ಷೆಯು ರಾಜ್ಯದ ನೀತಿ ನಿರೂಪಣೆ, ಸಂಪನ್ಮೂಲ ಹಂಚಿಕೆ ಮತ್ತು ಮೀಸಲಾತಿ ಸೂತ್ರಗಳನ್ನು ನಿರ್ಧರಿಸುವಲ್ಲಿ ಅತ್ಯಂತ ನಿರ್ಣಾಯಕ ಪಾತ್ರ ವಹಿಸುತ್ತದೆ.

ಹಿಂದುಳಿದ ವರ್ಗಗಳ ಸಮಗ್ರ ಕಲ್ಯಾಣಕ್ಕಾಗಿ ನಿಖರವಾದ ಸಾಮಾಜಿಕ ಮತ್ತು ಆರ್ಥಿಕ ದತ್ತಾಂಶ ಅತ್ಯಗತ್ಯ. ಆಯೋಗದ ಈ ಸಮೀಕ್ಷೆಯು ಜಾತಿ ಮತ್ತು ಆರ್ಥಿಕ ಸ್ಥಿತಿಗತಿಗಳ ವಾಸ್ತವ ಚಿತ್ರಣವನ್ನು ನೀಡಲು ಸಹಕಾರಿಯಾಗುತ್ತದೆ.

ಆಯೋಗವು 'ಒತ್ತಾಯ ಇಲ್ಲ' ಎಂದು ಹೇಳಿದರೂ, ಇದರರ್ಥ ಸಮೀಕ್ಷೆಯಲ್ಲಿ ಭಾಗವಹಿಸುವುದು ಅಪ್ರಸ್ತುತ ಎಂದಲ್ಲ. ಪ್ರತಿಯೊಬ್ಬ ನಾಗರಿಕನು ತನ್ನ ಮತ್ತು ತನ್ನ ಸಮುದಾಯದ ಸಮರ್ಪಕ ಹಕ್ಕು ಮತ್ತು ಸೌಲಭ್ಯಗಳನ್ನು ಪಡೆಯಲು ಸರಿಯಾದ ಮಾಹಿತಿ ಒದಗಿಸುವುದು ಒಂದು ಜವಾಬ್ದಾರಿಯಾಗಿದೆ. ಸ್ವಯಂ ಇಚ್ಛೆಯ ಈ ಘೋಷಣೆ, ಜನರ ಸಹಕಾರ ಮತ್ತು ವಿಶ್ವಾಸವನ್ನು ಗಳಿಸುವ ಒಂದು ಪ್ರಯತ್ನವಾಗಿದೆ.

ಈ ಸಮೀಕ್ಷೆಯ ಯಶಸ್ಸು, ರಾಜ್ಯದ ಸಮಗ್ರ ಮತ್ತು ನಿಖರ ಮಾಹಿತಿ ದೊರಕಿದಾಗ ಮಾತ್ರ ಸಾಧ್ಯ. ಆದ್ದರಿಂದ, ಪ್ರತಿಯೊಬ್ಬ ನಾಗರಿಕನು ಇದು ಸಾಮಾಜಿಕ ಜವಾಬ್ದಾರಿ ಎಂದು ಭಾವಿಸಿ, ಭಾಗವಹಿಸಿ, ನಿಖರ ಮಾಹಿತಿ ನೀಡುವ ಮೂಲಕ ನ್ಯಾಯಯುತ ಮತ್ತು ಸಮಾನ ಸಮಾಜ ನಿರ್ಮಾಣಕ್ಕೆ ಸಹಕರಿಸಬೇಕು.

---

**ಗುರುನಾಥ ದಾನಪ್ಪನವರ ನೇತೃತ್ವದಲ್ಲಿ 'ದುರ್ಗಾದೌಡ' ವಿಶಿಷ್ಟ ಧಾರ್ಮಿಕ ನಡಿಗೆ**

# ಸಂಸ್ಕೃತಿ, ಪರಂಪರೆಗಳನ್ನು ಪರಿಚಯಿಸುವ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದಸರಾ ಹಬ್ಬದ ನಿಮಿತ್ತ ಲಕ್ಷ್ಮೇಶ್ವರದಲ್ಲಿ ಶಿರಹಟ್ಟಿ ಮತಕ್ಷೇತ್ರ ಅಭಿವೃದ್ಧಿ ವೇದಿಕೆ ಅಧ್ಯಕ್ಷ ಗುರುನಾಥ ದಾನಪ್ಪನವರ ಅವರ ನೇತೃತ್ವದಲ್ಲಿ ದುರ್ಗಾದೌಡ ಎನ್ನುವ ಧಾರ್ಮಿಕ ನಡಿಗೆ ವಿಶಿಷ್ಟ ಕಾರ್ಯಕ್ರಮ ಅತ್ಯಂತ ಶ್ರದ್ಧಾ ಭಕ್ತಿಯಿಂದ ನೆರವೇರುತ್ತಿದೆ.



ಭಗವಾಧ್ವಜ ಮತ್ತು ದೇವಿಯ ಆಯುಧ ತ್ರಿಶೂಲ, ದೇವತೆಗಳ ವೇಷಭೂಷಣ ಧರಿಸಿದ ಹೆಣ್ಣು ಮಕ್ಕಳು, ಧರ್ಮ ಘೋಷ ಮೊಳಗಿಸುವ ಮೂಲಕ ನೂರಾರು ಭಕ್ತರ ಪಾಲ್ಗೊಳ್ಳುವಿಕೆಯೊಂದಿಗೆ ನಿತ್ಯ ಬೆಳಗಿನ ಜಾವ ನಡೆಯುತ್ತಿದೆ. ಪ್ರತಿಯೊಬ್ಬರೂ ಕೇಸರಿ ಧ್ವಜ ಹಿಡಿದು, ಶಾಲು ಹಾಕಿಕೊಂಡು ಸಾಗಿದರು. ದಾರಿ ಮಧ್ಯೆ ಭಕ್ತರು ತಮ್ಮ ಮನೆಯ ಮುಂದೆ ರಂಗೋಲಿ ಹಾಕಿ, ಪುಷ್ಪ ವೃಷ್ಟಿಯೊಂದಿಗೆ ಮೆರವಣಿಗೆಯನ್ನು ಬರಮಾಡಿಕೊಂಡರು.

ಈ ಸಂದರ್ಭದಲ್ಲಿ ಮಾತನಾಡಿದ ಕಾರ್ಯಕ್ರಮದ ರೂವಾರಿ, ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಸಮಗ್ರ ಅಭಿವೃದ್ಧಿ ವೇದಿಕೆ ಅಧ್ಯಕ್ಷ ಗುರುನಾಥ ದಾನಪ್ಪನವರ, ಪ್ರಸ್ತುತ ದಿನಮಾನಗಳಲ್ಲಿ ಸಮಾಜದಲ್ಲಿ ಧಾರ್ಮಿಕ ಮೌಲ್ಯ ಹೆಚ್ಚಿಸುವದು, ಧರ್ಮ ಜಾಗೃತಿ, ಧಾರ್ಮಿಕ ಕಲ್ಪನೆಗಳನ್ನು ಉಳಿಸಬೇಕು ಎನ್ನುವ ಉದ್ದೇಶ ಈ ಕಾರ್ಯಕ್ರಮದ್ದಾಗಿದೆ. ನವರಾತ್ರಿಯ 9 ದಿನಗಳ ಪುಣ್ಯಕಾಲದಲ್ಲಿ ದೇವತೆಗಳನ್ನು ಪೂಜಿಸುವುದು ಹಬ್ಬದ ವಿಶೇಷವಾಗಿದೆ. ಧರ್ಮೋ ರಕ್ಷತಿ ರಕ್ಷಿತಃ ಎಂಬಂತೆ ಧಾರ್ಮಿಕ ಆಚರಣೆಗಳಿಂದ ಧರ್ಮದ ತಳಹದಿಯ ಸಮಾಜ ನಿರ್ಮಾಣ ಸಾಧ್ಯವಾಗುತ್ತದೆ. ಕಳೆದ 4 ವರ್ಷಗಳಿಂದ ಈ ಕಾರ್ಯಕ್ರಮದಲ್ಲಿ ಎಲ್ಲರೂ ಸಮಾನತೆಯಿಂದ ಪಾಲ್ಗೊಳ್ಳುತ್ತಿದ್ದಾರೆ. ನಮ್ಮ ಸಂಸ್ಕೃತಿ, ಪರಂಪರೆ, ಇತಿಹಾಸಗಳನ್ನು ಯುವ ಪೀಳಿಗೆಗೂ ಪರಿಚಯಸಲು ಇಂತಹ ಕಾರ್ಯಕ್ರಮಗಳು ಅವಶ್ಯಕವಾಗಿದೆ ಎಂದರು.

ಜಿಟಿ ಜಿಟಿ ಮಳೆಯ ನಡುವೆಯೂ ದುರ್ಗಾದೌಡ ಬರುವ ಮಾರ್ಗದಲ್ಲಿ ಮಹಿಳೆಯರು ರಂಗೋಲಿ ಹಾಕಿ, ಪುಷ್ಪಗಳಿಂದ ಅಲಂಕರಿಸಿ ಸ್ವಾಗತಿಸಿದರು. ಈ ವೇಳೆ ಬಸವೇಶ ಮಹಾಂತಶೆಟ್ಟರ, ಗುರಣ್ಣ ಪಾಟೀಲ ಕುಲಕರ್ಣಿ, ತಿಪ್ಪಣ್ಣ ಸಂಶಿ, ಪುರಸಭೆ ಸದಸ್ಯ ಮಹೇಶ ಹೊಗೆಸೊಪ್ಪಿನ, ವಾಣಿ ಹತ್ತಿ, ಸೋಮೇಶ ಉಪನಾಳ, ಪುಲಿಕೇಶಿ ಬಟ್ಟೂರ, ನೀಲಪ್ಪ ಹತ್ತಿ, ರಾಜಣ್ಣ ಅರಳಿ, ಮಲ್ಲನಗೌಡ ಪಾಟೀಲ, ಆನಂದಲಿಂಗ ಶೆಟ್ಟಿ, ಶಿವಜೋಗೆಪ್ಪ ಚಂದರಗಿ, ಗಂಗಪ್ಪ ಗಿಡಿಬಿಡಿ, ಮಹಾದೇವ ಗಿಡಿಬಿಡಿ, ರವಿ ಲಿಂಗಶೆಟ್ಟಿ, ನಿಂಗನಗೌಡ ಪಾಟೀಲ, ರಾಘವೇಂದ್ರ ಪೂಜಾರ, ಮಂಜಯ್ಯ ಕಲಕೇರಿ ಮಠ, ರಾಜಶೇಖರಯ್ಯ ಶಿಗ್ಲಿಮಠ, ಜ್ಞಾನೋಭ ಬೊಮಲೆ, ಶಿವಣ್ಣ ಗಿಡಿಬಿಡಿ, ಈರಣ್ಣ ಹಾದಿಮನಿ ಸೇರಿದಂತೆ ಮಹಿಳೆಯರು, ಮಕ್ಕಳು, ಕದರಗೇರಿ ಓಣಿಯ ಶಿವರುದ್ರಮ್ಮ ದೇವಸ್ಥಾನ ಕಮಿಟಿಯವರು ಇದ್ದರು.


ಶನಿವಾರ, 6ನೇ ದಿನದ ದುರ್ಗಾದೌಡ ಧರ್ಮ ಜಾಗೃತಿ ಮೆರವಣಿಗೆ ಪಟ್ಟಣದ ಬಸ್ತಿಬಣದ ಬನಶಂಕರಿ ದೇವಸ್ಥಾನದಿಂದ ಪ್ರಾರಂಭವಾಗಿ ಮಾರ್ಗದಲ್ಲಿ ಬಸವಣ್ಣನ ದೇವಸ್ಥಾನ, ಮಲ್ಲಿಕಾರ್ಜುನ ದೇವಸ್ಥಾನ, ಆಂಜನೇಯ, ವಿಠೋಭ ರುಕ್ಮಾಯಿ, ಮೈಲಾರಲಿಂಗೇಶ್ವರ ದೇವಸ್ಥಾನ, ಸಣ್ಣ ದ್ಯಾಮವ್ವ, ಈಶ್ವರ, ವೀರಭದ್ರೇಶ್ವರ, ಪರ್ವತಮಲ್ಲಯ್ಯ, ಜೋಡ ಮಾರುತಿ, ಗೊಲ್ಲಾಳೇಶ್ವರ, ಗೌರಮ್ಮದೇವಿ, ಕಲ್ಮಠ, ದುರ್ಗವ್ವ-ದ್ಯಾಮವ್ವ ದೇವಸ್ಥಾನಗಳ ದರ್ಶನ ಪಡೆದು ಕದರಗಿರಿ ಓಣಿಯ ಶ್ರೀ ಶಿವರುದ್ರಮ್ಮ ದೇವಸ್ಥಾನದಲ್ಲಿ ಧರ್ಮದ ನಡಿಗೆ ಸಂಪನ್ನಗೊಂಡಿತು.

---

# ಪೂರ್ವಭಾವಿ ಸಭೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ವಿದ್ಯಾದಾನ ಸಮಿತಿಯ ಮೈದಾನದಲ್ಲಿ ನವೆಂಬರ್ 11ರಿಂದ 18ರವರೆಗೆ ನಾಗಾಸಾಧು ಸಹದೇವಾನಂದ ಗಿರಿಜೀ ಮಹಾರಾಜ ಜುನಾ ಆಕಾಡ ಮಂತ್ರಿ ಅವರ ನೇತೃತ್ವದಲ್ಲಿ ಜರುಗಲಿರುವ ಅತಿರುದ್ರ ಮಹಾಯಾಗ ಹಾಗೂ ಕಿರಿಯ ಕುಂಭಮೇಳ ಕಾರ್ಯಕ್ರಮದ ಕುರಿತು ಚರ್ಚಿಸಲು ಸೆ. 28ರಂದು ಮುಂಜಾನೆ 11 ಗಂಟೆಗೆ



ನಗರದ ಎಸ್.ಬಿ.ಎಸ್ ಗಾರ್ಡನ್‌ನಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ.

ಗದಗ ಜಿಲ್ಲೆಯ ವಿವಿಧ ಸಮಾಜ ಸಂಘಟನೆಗಳ ಪದಾಧಿಕಾರಿಗಳು, ಮುಖಂಡರು, ಸಂಘ-ಸಂಸ್ಥೆಗಳ ಪದಾಧಿಕಾರಿಗಳು 10 ನಿಮಿಷ ಮುಂಚಿತವಾಗಿ ಆಗಮಿಸಿ, ಸಭೆಯಲ್ಲಿ ಪಾಲ್ಗೊಂಡು ಸಲಹೆ-ಸೂಚನೆ ನೀಡಲು ಅತಿರುದ್ರ ಮಹಾಯಾಗ ಹಾಗೂ ಕಿರಿಯ ಕುಂಭಮೇಳ ಸಮಿತಿಯ ಪ್ರಕಟಣೆ ವಿನಂತಿಸಿದೆ.

---



ಗದಗ ಸಮೀಪದ ತಿಮ್ಮಾಪೂರ ಗ್ರಾಮದ ಕೆವಿಎಸ್‌ಆರ್ ಪ್ರೌಢಶಾಲೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಶಿಕ್ಷಕರಾದ ಎಚ್.ಎಸ್. ಕುರಿ, ವಿ.ಆರ್. ಹುಯಿಲಗೋಳ, ಟಿ.ವಾಯ್. ಕುರಿ, ವಿ.ಬಿ. ದೇಶಪಾಂಡೆ, ಎಸ್.ಎ. ಕಮ್ಮಾರ ಇವರನ್ನು ಶಿಷ್ಯರು ಮನೆ ಮನೆಗೆ ತೆರಳಿ ಶಿಕ್ಷಕರ ದಿನಾಚರಣೆ ಪ್ರಯುಕ್ತ ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಕೆವಿಎಸ್‌ಆರ್ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ರಾಮಣ್ಣ ಕುರಡಗಿ, ಸೋಂಪೂರ ಪ್ರೌಢಶಾಲೆಯ ಶಿಕ್ಷಕರಾದ ಆರ್.ಬಿ. ಅಬ್ಬಿಗೇರಿ, ಭಾಸ್ಕರ್ ಪತ್ತಾರ, ಐ.ಕೆ. ಶಾಂತಗೇರಿ ಪಾಲ್ಗೊಂಡಿದ್ದರು.

---

**ಸ್ವಸ್ಥ ನಾರಿ-ಶಸಕ್ತ ಪರಿವಾರ ಅಭಿಯಾನ ಕಾರ್ಯಕ್ರಮದಲ್ಲಿ ಡಾ. ಮುಕುಂದ ಗಲಗಲಿ**

# ಅಭಿಯಾನದ ಸದುಪಯೋಗ ಪಡೆಯಿರಿ

■ವಿಜಯಸಾಕ್ಷಿ ಸುದ್ದಿ, ಗದಗ

ಸ್ವಸ್ಥ ನಾರಿ-ಸಶಕ್ತ ಪರಿವಾರ ಒಂದು ಉಪಯುಕ್ತ ಆರೋಗ್ಯ ಅಭಿಯಾನವಾಗಿದ್ದು, ಇದರ ಸದುಪಯೋಗವನ್ನ ಮಹಿಳೆಯರು ಎಲ್ಲರೂ ಪಡೆಯಬೇಕೆಂದು ವಿಶ್ವ ಆರೋಗ್ಯ ಸಂಸ್ಥೆಯ ವಿಜಯಪುರ ವಲಯದ ಸಮೀಕ್ಷಾ ಆರೋಗ್ಯ ಅಧಿಕಾರಿ ಡಾ. ಮುಕುಂದ ಗಲಗಲಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕಾ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ, ಸಮುದಾಯ ಆರೋಗ್ಯ ಕೇಂದ್ರ ಬೆಟಗೇರಿ ಇವುಗಳ ಸಂಯುಕ್ತ ಆಶ್ರಯದಲ್ಲಿ ಬೆಟಗೇರಿಯ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಏರ್ಪಡಿಸಲಾಗಿದ್ದ ಸ್ವಸ್ಥ ನಾರಿ-ಶಸಕ್ತ ಪರಿವಾರ ಅಭಿಯಾನ



ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ತಾಲೂಕಾ ಆರೋಗ್ಯ ಅಧಿಕಾರಿ ಡಾ. ಪ್ರೀತ್ ಖೋನಾ ಮಾತನಾಡಿ, ಇದೊಂದು ಉತ್ತಮ ಅವಕಾಶವಾಗಿದ್ದು, ಈ ಅಭಿಯಾನದಲ್ಲಿ ಮಹಿಳೆಯರ ಆರೋಗ್ಯ ಸಮಸ್ಯೆಗಳ ಜೊತೆಗೆ ಮಧುಮೇಹ, ಕ್ಯಾನ್ಸರ್, ಕ್ಷಯ ಮುಂತಾದ ರೋಗಗಳ ಕುರಿತು ಚಿಕಿತ್ಸೆ ನೀಡಲಾಗುತ್ತಿದೆ ಎಂದರು.

ಉಪನ್ಯಾಸಕರಾಗಿ ಆಗಮಿಸಿದ್ದ ಗದಗ ತಾಲೂಕಾ ಆರೋಗ್ಯ ಶಿಕ್ಷಣಾಧಿಕಾರಿ ಡಾ. ರಾಜೇಂದ್ರ ಎಸ್.ಗಡಾದ ಮಾತನಾಡಿ, ನಮ್ಮ ಭಾರತೀಯ ಸಂಸ್ಕೃತಿಯಲ್ಲಿ ಮಹಿಳೆಗೆ ಅತ್ಯುತ್ತಮ ಸ್ಥಾನವನ್ನು ಕಲ್ಪಿಸಲಾಗಿದ್ದು, ಮಹಿಳೆ ಇಡೀ ಕುಟುಂಬದ ಆಧಾರ ಸ್ತಂಭವಾಗಿದ್ದಾಳೆ. ಅವರ ಆರೋಗ್ಯವೇ ತುಂಬಾ ಮುಖ್ಯವಾದುದಾಗಿದೆ. ಕುಟುಂಬದ ಮಹಿಳೆಯರು ಆರೋಗ್ಯವಾಗಿದ್ದರೆ ಇಡೀ ಕುಟುಂಬವೇ ಆರೋಗ್ಯವಾಗಿರುತ್ತದೆ ಎಂದು ತಿಳಿಸಿ, ಅಭಿಯಾನದ ಉದ್ದೇಶ ಮಹತ್ವವನ್ನ ವಿವರಿಸಿದರು

ಸಮಾರಂಭದ ಅಧ್ಯಕ್ಷತೆಯನ್ನು ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಪ್ರಕಾಶ್ ಕಬ್ಬರಿಗೆ ವಹಿಸಿದ್ದರು. ಆರೋಗ್ಯ ನಿರೀಕ್ಷಣಾಧಿಕಾರಿ ಸಿದ್ದಪ್ಪ ಲಿಂಗದಾಳ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಪ್ರವೀಣ್ ರಾಮಗಿರಿ ವಂದಿಸಿದರು. ವೇದಿಕೆಯ ಮೇಲೆ ತಜ್ಞ ವೈದ್ಯರುಗಳಾದ ಡಾ. ಸಚಿನ್, ಡಾ. ರಾಘವೇಂದ್ರ, ಡಾ. ಶ್ರೀದೇವಿ, ಡಾ. ಓಂಕಾರ್, ಡಾ. ಮಂಜುನಾಥ್, ಡಾ. ಪ್ರವೀಣ್, ಡಾ. ಸ್ಪರ್ಷಾ ಚನ್ನಪ್ಪಗೌಡರ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆಯ ವಾಯ್.ವಾಯ್. ಹಕ್ಕಿ, ಎಸ್.ಬಿ. ಗಡಾದ, ಶ್ವೇತಾ ದೇಸಾಯಿ, ಮಂಜುನಾಥ್ ಭಂಡಾರಿ, ಸುನಂದ ಶಿಶುವಿನಹಳ್ಳಿ, ಶಕುಂತಲಾ ಎನ್.ಹೊಸಮನಿ ಮುಂತಾದವರು ಉಪಸ್ಥಿತರಿದ್ದರು.

---

# ಗಣತಿ ಸಮೀಕ್ಷಾ ಜಾಗೃತಿ ಜಾಥಾ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ಅನ್ನದಾನೇಶ್ವರ ಪದವಿ ಮಹಾವಿದ್ಯಾಲಯ ಹಾಗೂ ಸ್ನಾತಕೋತ್ತರ ಕೇಂದ್ರದ ರಾಷ್ಟ್ರೀಯ ಸೇವಾ ಯೋಜನೆ ಅ ಮತ್ತ ಬ ಘಟಕಗಳ ವತಿಯಿಂದ ಕೋಡಿಕೊಪ್ಪ ಮತ್ತು ಶ್ರೀ ಅನ್ನದಾನೇಶ್ವರ ನಗರದಲ್ಲಿ ಸಾಮಾಜಿಕ, ಶೈಕ್ಷಣಿಕ ಗಣತಿಯ ಸಮೀಕ್ಷಾ ಜಾಗೃತಿ ಜಾಥಾವನ್ನು ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ ಅವರ ಮಾರ್ಗದರ್ಶನದಲ್ಲಿ ಏರ್ಪಡಿಸಲಾಗಿತ್ತು.

ಗಣತಿದಾರರು ನಿಮ್ಮ ಮನೆಯ ಬಾಗಿಲಿಗೆ ಬಂದಾಗ ಅವರಿಗೆ ಸರಿಯಾದ ಮಾಹಿತಿಗಳನ್ನು ನೀಡಿ ಸಹಕರಿಸಿ. ಈ ಗಣತಿಯಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಪ್ರಗತಿಗೆ ಸರಕಾರ ಸಿಗಲಿದೆ. ಮನೆಯಲ್ಲಿರುವ ಸದಸ್ಯರುಗಳ ಮಾಹಿತಿಯನ್ನು ಸರಿಯಾಗಿ ನೀಡಿ ಸಹಕರಿಸಬೇಕೆಂದು ಪ್ರಾಧ್ಯಾಪಕ ಡಾ. ಎಂ.ಆರ್. ಶಿವರಾಮ ಹೇಳಿದರು.

ಇದೇ ಸಂದರ್ಭದಲ್ಲಿ ಗ್ರಾಮದ ದೇವಸ್ಥಾನವನ್ನು ಸ್ವಚ್ಛಗೊಳಿಸುವ ಮೂಲಕ ವಿದ್ಯಾರ್ಥಿಗಳು ಸ್ವಚ್ಛತೆಯ ಬಗ್ಗೆ ಜಾಗೃತಿ ಮೂಡಿಸಿದರು. ಡಾ. ಕಲ್ಲಯ್ಯ ಹಿರೇಮಠ, ಪುಂಡಲೀಕ ಮಾದರ, ದೈಹಿಕ ನಿರ್ದೇಶಕ ಎಸ್.ಬಿ. ಗೌಡರ, ಡಾ. ಆರ್.ಆರ್. ಪಾಟೀಲ, ಡಾ. ಡಿ.ಎಲ್. ಪವಾರ, ಡಾ. ಸಂದೀಪಕುಮಾರ, ಡಾ. ಹೃಷಿಕೇಷ ಪವಾರ, ರಾಮಚಂದ್ರ ಜೆ.ಗಡ್ಡದ, ಎ.ಎಸ್. ನವೀನ ತಳವಾರ, ಪ್ರಶಾಂತ ದಾಸರ ಮುಂತಾದವರಿದ್ದರು.

---

# ಬಂಧಿತ ಕಾರ್ಯಕರ್ತರ ಬಿಡುಗಡೆ ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಹಿಂದಿ ಹೇರಿಕೆಯನ್ನು ವಿರೋಧಿಸಿ ಬಂಧನಕ್ಕೊಳಗಾಗಿರುವ 41 ಜನ ಕರವೇ ಕಾರ್ಯಕರ್ತರನ್ನು ಬಿಡುಗಡೆ ಮಾಡುವಂತೆ ಕರ್ನಾಟಕ ರಕ್ಷಣಾ ವೇದಿಕೆ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಹನಮಂತಪ್ಪ ಅಬ್ಬಿಗೇರಿ ನೇತೃತ್ವದಲ್ಲಿ ಗದಗ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಹನಮಂತಪ್ಪ ಅಬ್ಬಿಗೇರಿ ಮಾತನಾಡಿ, ರಾಜ್ಯದಲ್ಲಿ ಹಿಂದಿ ಹೇರಿಕೆಯನ್ನು ವಿರೋಧಿಸಿ ಬೆಂಗಳೂರಿನಲ್ಲಿ ಹೋರಾಟ ನಡೆಸಿದ ಬೆಂಗಳೂರು ನಗರ ಕರವೇ ಕಾರ್ಯಕರ್ತರನ್ನು ಬಂಧಿಸಿರುವ ಪೊಲೀಸರ ಕ್ರಮ ಖಂಡನೀಯ. ತಾವು ಕೂಡಾ ಕನ್ನಡ ಭಾಷಾಭಿಮಾನಿಗಳಾಗಿದ್ದು, ಕನ್ನಡಿಗರಿಗೆ, ಕನ್ನಡಕ್ಕೆ ನ್ಯಾಯ ಕೊಡಬೇಕೆಂದು ವಿನಂತಿಸಿದರು.

ಈ ಸಂದರ್ಭದಲ್ಲಿ ನಿಂಗನಗೌಡ ಮಾಲಿಪಾಟೀಲ್, ಮುತ್ತಣ್ಣ ಚವಡಣ್ಣವರ, ತೌಸಿಫ ಡಾಲಾಯತ್, ಮಹಿಳಾ ಘಟಕದ ಜಿಲ್ಲಾಧ್ಯಕ್ಷರಾದ ಲಕ್ಷ್ಮೀ ಹಿತ್ತಲಮನಿ, ವಿನಾಯಕ್ ಬದಿ, ಯಲ್ಲಪ್ಪ ಭೋವಿ, ಗಿರೀಶ್ ಕೆಗಡದಿನ್ನಿ, ರೆಹಮಾನ್ ದರ್ಗದ, ಯಶೋಧ ಬಾಲಾಜಿ, ಗಂಗಮ್ಮ ಕೇಳಿಕೆತರ್, ರೂಪಾ ಕುಲಕರ್ಣಿ, ಸಿರಾಜ್ ಹೊಸಮನಿ, ಈರಣ್ಣ ಹಿರೇಗೌಡ್ರು, ಯಲಪ್ಪ ನಾಗಸಮುದ್ರ ಸೇರಿದಂತೆ ಕರವೇ ಕಾರ್ಯಕರ್ತರು ಉಪಸ್ಥಿತರಿದ್ದರು.

---

# ಶರನ್ನವರಾತ್ರಿ ಅಂಗವಾಗಿ ಸಾಮೂಹಿಕ ಸೀಮಂತ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ದಂಡಿನ ದುರ್ಗಾದೇವಿ ದೇವಸ್ಥಾನದಲ್ಲಿ ಶರನ್ನವರಾತ್ರಿ ಅಂಗವಾಗಿ ಸಾಮೂಹಿಕ ಸೀಮಂತ ಕಾರ್ಯಕ್ರಮವು ಸಡಗರ ಸಂಭ್ರಮದಿಂದ ಜರುಗಿತು.

ದಂಡಿನ ದುರ್ಗಾದೇವಿ ಸೇವಾ ಸಮಿತಿಯು ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಗ್ರಾಮದ 18 ಗರ್ಭಿಣಿಯರು ಸಾಮೂಹಿಕ ಸೀಮಂತ ಕಾರ್ಯಕ್ರಮದಲ್ಲಿ ಪಾಲ್ಗೊಂಡರು. ಈ ಸಂದರ್ಭದಲ್ಲಿ ಸೋಬಾನೆ ಪದಗಳನ್ನು ಹಾಡುವ ಮೂಲಕ ಮನರಂಜಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಂಕ್ರಯ್ಯಶಾಸ್ತ್ರೀಗಳು ಹಿರೇಮಠ, ನವರಾತ್ರಿ ಆಚರಣೆಯಲ್ಲಿ ಸಾಮೂಹಿಕ ಸೀಮಂತ ನೆರವೇರಿಸಿಕೊಳ್ಳುವ ಗರ್ಭಿಣಿಯರಿಗೆ ಸರಳ ಹೆರಿಗೆ ಆಗುವುದರೊಂದಿಗೆ ಆರೋಗ್ಯವಂತ ಮಗುವು ಜನಿಸುತ್ತದೆ. ತಾಯಿಂದಿರು



ತಮ್ಮ ಮಗುವಿಗೆ ಉತ್ತಮ ಸಂಸ್ಕಾರ ನೀಡಿ ಈ ಸಮಾಜಕ್ಕೆ ಕೊಡುಗೆಯಾಗಿ ನೀಡಬೇಕು ಎಂದರು.

ಸೇವಾ ಸಮಿತಿ ಸದಸ್ಯ ನಜೀರಅಹ್ಮದ ಕೀರಿಟಗೇರಿ ಮಾತನಾಡಿ, ಕಳೆದ 25 ವರ್ಷದಿಂದ ದುರ್ಗಾದೇವಿ ದೇವಸ್ಥಾನದಲ್ಲಿ ನವರಾತ್ರಿ ಅಂಗವಾಗಿ ದೇವಿ ಪುರಾಣದ ಜತೆಗೆ ಗ್ರಾಮದ ಸರ್ವ ಜಾತಿ, ಧರ್ಮದವರ ಗರ್ಭಿಣಿಯರ ಸಾಮೂಹಿಕ ಸೀಮಂತ ಕಾರ್ಯಕ್ರಮವು ಭಾವೈಕ್ಯತೆಯನ್ನು ಮೂಡಿಸುತ್ತಿದೆ ಎಂದರು.

ಸೀಮಂತದಲ್ಲಿ ಪಾಲ್ಗೊಂಡ ಲಕ್ಷ್ಮೀ, ಮಾಲಾ ಮಾತನಾಡಿ, ನಮ್ಮ ಕುಟುಂಬದವರು ಮಾಡುವ ಸೀಮಂತ ಕಾರ್ಯದ ಫಲಕ್ಕಿಂತ ದೇವಿ ಪುರಾಣದ ಸಾಮೂಹಿಕ ಸೀಮಂತ ಕಾರ್ಯದಿಂದ ನನಗೆ ಮತ್ತು ನನ್ನ ಮಗುವಿಗೆ ದೇವಿಯ ಆಶೀರ್ವಾದ ದೊರೆಯುತ್ತಿರುವುದು ಸಂತಸ ತಂದಿದೆ ಎಂದರು.

ಪ್ರವಚನಕಾರರಾದ ಕೊಟ್ರಯ್ಯಶಾಸ್ತ್ರಿಗಳು ನರಗುಂದಮಠ ಅವರು ಸಾಮೂಹಿಕ ಸೀಮಂತ ಕಾರ್ಯ ಮತ್ತು ದೇವಿ ಪುರಾಣ ಕಾರ್ಯಕ್ರಮದ ಕುರಿತು ವಿವರಿಸಿದರು. ಮಂಜುನಾಥ ಗರ್ಜಪ್ಪನವರ, ಈರಪ್ಪ ಕರಿಯಲ್ಲಪ್ಪನವರ ಸಂಗೀತ ಸೇವೆ ನೀಡಿದರು. ಸೇವಾ ಸಮಿತಿಯ ಅಧ್ಯಕ್ಷ ರುದ್ರಪ್ಪ ಮುಸ್ಕಿನಭಾವಿ, ತಾ.ಪಂ ಮಾಜಿ ಅಧ್ಯಕ್ಷ ಎಂ.ಎಸ್. ಉಮಚಗಿ, ಶಿವಣ್ಣ ಸಜ್ಜನರ, ನಜೀರಅಹ್ಮದ ಕೀರಿಟಗೇರಿ, ವೀರಯ್ಯ ಗಂಧದ, ಮಂಜುನಾಥ ಪುರದ, ಪ್ರೇಮಾ ಮಟ್ಟಿ, ನೀಲಮ್ಮ ವಡ್ಡರ, ಸಾವಿತ್ರಿ ಯಲಿಶಿರುಂಜ, ಅಂಗನವಾಡಿ ಕಾರ್ಯಕರ್ತರು ಹಾಜರಿದ್ದರು.

# ಎಸ್.ಎಸ್.ಕೆ ದಸರಾ ಉತ್ಸವದ ಇಂದಿನ ಕಾರ್ಯಕ್ರಮ

**■ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಎಸ್.ಎಸ್.ಕೆ ದಸರಾ ಉತ್ಸವ ಸಮಿತಿ ವತಿಯಿಂದ ಭಾನುವಾರ ಮುಂಜಾನೆ 9 ಗಂಟೆಗೆ ಎಸ್.ಎಸ್.ಕೆ ಸಮಾಜದ ವಿದ್ಯಾರ್ಥಿಗಳಿಗಾಗಿ ಮೂರುಕಾಲಿನ ಓಟ, ಲಿಂಬು ಚಮಚೆ, ಗೋಣಿ ಚೀಲ ಓಟ, ಸ್ಲೋ ಸೈಕ್ಲಿಂಗ್ ಆಟಗಳು ಬೆಟಗೇರಿಯ ಎಸ್.ಎಸ್.ಕೆ ಜಗದಂಬಾ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ನೆರವೇರಲಿದೆ.

ನಂತರ ಬೆಟಗೇರಿ ಶ್ರೀ ಜಗದಂಬಾ ದೇವಸ್ಥಾನದಿಂದ ಶ್ರೀ ದಂಡಿನ ದುರ್ಗಮ್ಮನ ದೇವಸ್ಥಾನದವರೆಗೆ ವೇಗದ ಸೈಕಲ್ ಸ್ಪರ್ಧೆಯನ್ನು ನಡೆಸಲಾಗುವುದು. ಸಾಯಂಕಾಲ 7 ಗಂಟೆಗೆ ಉತ್ಸವ ಗ್ರುಪ್ ಮಹಿಳೆಯರಿಂದ ಅಷ್ಟಲಕ್ಷ್ಮೀ ನೃತ್ಯ ಕಾರ್ಯಕ್ರಮ, ರಶ್ಮಿ ಅರಸಿದ್ದಿ ಹಾಗೂ ರೇಣುಕಾ ಕಬಾಡಿ ಅವರಿಂದ ದೇವಿ ಸ್ತುತಿ, 7.30 ಗಂಟೆಗೆ ಎಸ್.ಎಸ್.ಕೆ ಸಮಾಜದ ದಂಪತಿಗಳಿಗಾಗಿ ಆದರ್ಶ ದಂಪತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಉತ್ಸವ ಸಮಿತಿಯ ಗೌರವ ಕಾರ್ಯದರ್ಶಿ ಶ್ರೀರಾಮ ಹಬೀಬ ವಹಿಸುವರು. ಮುಖ್ಯ ಅತಿಥಿಗಳಾಗಿ ರೋಣದ ಯುವ ಉದ್ಯಮಿ ಸಿದ್ದು ಪುಂಡಲೀಕಸಾ ಮಿಸ್ಕಿನ್, ಗದುಗಿನ ಕಿಶೋರ ಪಿ.ಪೂಜಾರಿ, ಗಜೇಂದ್ರಗಡದ ದೀಪಕ ಎಮ್.ಶಿಂಗ್ರಿ, ಗುಡೂರಿನ ಸಾಗರ ಪಿ.ಪಾಟೀಲ ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ ಬೆಟಗೇರಿಯ ಗಣ್ಯ ಉದ್ದಿಮೆದಾರರಾದ ವಿಜಯಮಾಲಾ ಫ್ಯಾಷನ್‌ನ ನಾರಾಯಣ ಟಿ.ಮೇರವಾಡೆ, ಮೊಮೆಂಟೊ ಸೇವೆಗೈದ ಗದುಗಿನ ಮೀನಾಕ್ಷಿಬಾಯಿ ಪರಶುರಾಮಸಾ ಪೂಜಾರಿ ಇವರನ್ನು ಸನ್ಮಾನಿಸಲಾಗುವದು ಎಂದು ಪ್ರಕಟಣೆ ತಿಳಿಸಿದೆ.

### ಅಡವಿಂದ್ರಸ್ವಾಮಿ ಮಠದ ದಸರಾ ಮಹೋತ್ಸವದಲ್ಲಿ ಗಣ್ಯರಿಗೆ ಪ್ರಶಸ್ತಿ ಪ್ರದಾನ

# ಆರಾಧನೆ ಮೂಲಕ ದೈವೀಶಕ್ತಿ ಪಡೆದು ಪಾವನರಾಗಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಪರಂಪರೆಯಂತೆ ನವರಾತ್ರಿಯ ಸಂದರ್ಭದಲ್ಲಿ ಶಕ್ತಿದೇವಿಯ ಆರಾಧನೆ ಮಾಡುವ ಮೂಲಕ ದೈವೀಶಕ್ತಿಯನ್ನು ಪಡೆದು ಪಾವನರಾಗಬೇಕು ಎಂದು ನರಗುಂದ ದೊರೆಸ್ವಾಮಿಮಠ ಹಾಗೂ ಶಿರೋಳ ತೋಂಟದಾರ್ಯ ಶಾಖಾಮಠದ ಶ್ರೀಶಾಂತಲಿಂಗ ಮಹಾಸ್ವಾಮಿಗಳು ಹೇಳಿದರು.

ನಗರದ ಮುಳಗುಂದನಾಕಾ ಬಳಿಯ ಶ್ರೀಅಡವೀಂದ್ರಸ್ವಾಮಿ ಮಠದಲ್ಲಿ ದಸರಾ ಮಹೋತ್ಸವ ಮತ್ತು ಶ್ರೀದೇವಿ ಪುರಾಣ ಪ್ರವಚನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಅಡವೀಂದ್ರಸ್ವಾಮಿ ಮಠದಲ್ಲಿ ಕಳೆದ ಹಲವಾರು ವರ್ಷಗಳಿಂದ ನವರಾತ್ರಿಯ ಸಂದರ್ಭದಲ್ಲಿ ಶ್ರೀಅನ್ನಪೂರ್ಣೇಶ್ವರಿಯ ವಿಶೇಷ ಪೂಜೆಯೊಂದಿಗೆ ಶಕ್ತಿದೇವಿಯ ಆರಾಧನೆ ಮಾಡಲಾಗುತ್ತಿದ್ದು, ಪ್ರಸಕ್ತ ವರ್ಷ ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ಸದಾಶಿವಯ್ಯ ಮದರಿಮಠ ಅವರ ತಂಡದ ನೇತೃತ್ವದಲ್ಲಿ ಅದ್ದೂರಿಯಿಂದ ಆಚರಣೆ ಮಾಡುತ್ತಿರುವುದು ಶ್ಲಾಘನೀಯ ಎಂದು ಶ್ರೀಗಳು ಹೇಳಿದರು.



ಶ್ರೀ ಅಡವೀಂದ್ರ ಸ್ವಾಮಿಮಠದ ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮೀಜಿ ಸಮ್ಮುಖದಲ್ಲಿ ಲಿಂ. ಶ್ರೀಶಿವಮೂರ್ತೆಪ್ಪ ಎಸ್.ಬಳಿಗಾರ ಅವರ ಭಾವಚಿತ್ರವನ್ನು ಅನಾವರಣಗೊಳಿಸಲಾಯಿತು. ಶ್ರೀದೇವಿಗೆ ಹಾಗೂ ಮುತ್ತೈದೆಯರಿಗೆ ಅರಿಷಿಣ-ಕುಂಕುಮ, ಬಳೆ ಸೇವೆ ನೆರವೇರಿಸಲಾಯಿತು.

ಶ್ರೀ ಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿಯ ಗೌರವಾಧ್ಯಕ್ಷ ಎಸ್.ಪಿ. ಸಂಶಿಮಠ, ಅಧ್ಯಕ್ಷರಾದ ಸದಾಶಿವಯ್ಯ ಮದರಿಮಠ, ಪ್ರಧಾನ ಕಾರ್ಯದರ್ಶಿ ಶರಣಬಸಪ್ಪ ಗುಡಿಮನಿ, ಮಹಿಳಾ ಸಮಿತಿ ಅಧ್ಯಕ್ಷರಾದ ಸುವರ್ಣಾ ಮದರಿಮಠ ಮುಂತಾದ ಗಣ್ಯರು ವೇದಿಕೆಯಲ್ಲಿದ್ದರು.

ಶ್ರೀ ಅನ್ನಪೂರ್ಣೇಶ್ವರ ಸನ್ನಿಧಿಯಲ್ಲಿ ಡಾ. ರಾಜಗುರು ಗುರುಸ್ವಾಮಿ ಕಲಕೇರಿ ಅವರಿಂದ ಪುರಾಣ ಪ್ರವಚನ ನಡೆಯಿತು. ಚನ್ನಬಸಯ್ಯ ಶಾಸ್ತ್ರಿಗಳು ಹೇಮಗಿರಿಮಠ ಪುರಾಣ ಪಠಿಸಿದರು. ಪಕ್ರುಸಾಬ ಮುಲ್ಲಾ, ಜಗನ್ನಾಥ ಕಲಬುರಗಿ, ಶರಣಕುಮಾರ ಗುತ್ತರಗಿ, ಎಸ್.ಬಿ. ಭಜಂತ್ರಿ ಸಂಗೀತ ಸೇವೆ ನೀಡಿದರು.

ಪೂಜಾ ಸಮಿತಿ ಅಧ್ಯಕ್ಷರಾದ ಶರಣಯ್ಯಸ್ವಾಮಿ ಶಿವಪ್ಪಯ್ಯನಮಠ, ವೀರೇಶ್ವರ ಸ್ವಾಮಿಗಳು ಹೊಸಳ್ಳಿಮಠ, ಜಾತ್ರಾ ಮಹೋತ್ಸವ ಸಮಿತಿ ಕಾರ್ಯದರ್ಶಿ ಗೀತಾ ಎಂ.ಹೂಗಾರ, ಸಹ ಕಾರ್ಯದರ್ಶಿ ಸುಷ್ಮಾ ಖಂಡಪ್ಪಗೌಡ್ರ, ಕೋಶಾಧ್ಯಕ್ಷರಾದ ಅಶ್ವಿನಿ ನೀಲಗುಂದ, ವಿ.ಎಚ್. ದೇಸಾಯಿಗೌಡ್ರ ಮತ್ತಿತರ ಗಣ್ಯರು ಉಪಸ್ಥಿತರಿದ್ದರು. ಸಮಾರಂಭದಲ್ಲಿ ಪ್ರಸಾದ ಹಾಗೂ ಇತರೇ ಭಕ್ತಿಸೇವೆ ವಹಿಸಿದ್ದ ಗಣ್ಯರನ್ನು ಗುರುರಕ್ಷೆ ನೀಡಿ ಗೌರವಿಸಲಾಯಿತು.

ಭೂಮಿಕಾ ಹೊಸಳ್ಳಿಮಠ ನೃತ್ಯ ಪ್ರದರ್ಶಿಸಿದರು. ವಿರೂಪಾಕ್ಷಯ್ಯ ಹೊಸಳ್ಳಿಮಠ ಕೊಳಲುವಾದನ ಪ್ರಸ್ತುತಪಡಿಸಿದರು. ವಿಜಯಲಕ್ಷ್ಮೀ ಹೊಸಳ್ಳಿಮಠ ಸ್ವಾಗತಿಸಿದರು. ವಿ.ಎಂ. ಕುಂದ್ರಾಳಹಿರೇಮಠ ಕಾರ್ಯಕ್ರಮ ನಿರೂಪಿಸಿದರು. ಶ್ರೀಧರ ಧರ್ಮಾಯತ ವಂದಿಸಿದರು.

ಕಾರ್ಯಕ್ರಮದಲ್ಲಿ ಗಣ್ಯ ಉದ್ದಿಮೆದಾರರಾದ ವಿನಾಯಕ ತೇಜಪ್ಪಗೌಡ ಪಾಟೀಲ ಹಾಗೂ ಬಸವರಾಜ ಶಿವಪ್ಪ ಅಂಗಡಿ ಅವರಿಗೆ ಶ್ರೇಷ್ಠ ಉದ್ಯಮಶ್ರೀ ಪ್ರಶಸ್ತಿ, ಕೆಇಬಿ ನಿವೃತ್ತ ಅಧಿಕಾರಿ ಜಿ.ಎಂ. ಯಾನಮಶೆಟ್ಟಿ ಅವರಿಗೆ ಸಮಾಜಸೇವಾ ರತ್ನ ಪ್ರಶಸ್ತಿಯನ್ನು ಪ್ರದಾನ ಮಾಡಿ ಗೌರವಿಸಲಾಯಿತು. ತೆರಿಗೆ ಸಲಹೆಗಾರರಾದ ಶ್ರೀಶೈಲ ಎಸ್.ಬಳಿಗಾರ ಅವರಿಗೆ ಗುರುಶ್ರೀ ರಕ್ಷೆ ನೀಡಿ ಸನ್ಮಾನಿಸಲಾಯಿತು.

# ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಇಲಾಖೆಯ 13 ಫಲಾನುಭವಿ ಆಧಾರಿತ ಯೋಜನೆಗಳನ್ನು 2025-26ನೇ ಸಾಲಿನಲ್ಲಿ ಉಲ್ಲೇಖಿತ ಪತ್ರದನ್ವಯ ಸುವಿಧಾ ಯೋಜನೆ ಇವರಿಂದ ಡಿ.ಬಿ.ಟಿ (ನೇರ ನಗದು ವರ್ಗಾವಣೆ) ಆನ್‌ಲೈನ್ ವೇದಿಕೆ ತಂತ್ರಾಂಶದಡಿ ಅಳವಡಿಸಲಾಗುತ್ತಿದೆ.

ಆನ್‌ಲೈನ್ ವೇದಿಕೆಯಲ್ಲಿ ಅಳವಡಿಸಲಾಗಿರುವ ಯೋಜನೆಗಳ ಪಟ್ಟಿ

ಯೋಜನೆಗಳ ವಿವರ, ಆಧಾರ್ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ದೃಷ್ಟಿದೋಷ ಹೊಂದಿರುವ ವಿಕಲಚೇತನರಿಗೆ ಬ್ರೈಲ್‌ಕಿಟ್ ಯೋಜನೆ, ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಯೋಜನೆ, ದೈಹಿಕ ವಿಕಲಚೇತನರಿಗೆ ಯಂತ್ರ ಚಾಲಿತ ದ್ವಿಚಕ್ರ ವಾಹನ ಯೋಜನೆ, ನಿರುದ್ಯೋಗ ಭತ್ಯೆ ಯೋಜನೆ, ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ಶಿಶುಪಾಲನಾ ಭತ್ಯೆ ಯೋಜನೆ, ಸಾಧನೆ ಸಲಕರಣೆಗಳ ಯೋಜನೆ, ಮರಣ ಪರಿಹಾರ ನಿಧಿ ಯೋಜನೆ, ವಿಕಲಚೇತನ ವ್ಯಕ್ತಿಗಳಿಗೆ ಬ್ಯಾಟರಿ ಚಾಲಿತ ವ್ಹೀಲ್ ಚೇರ್ ಯೋಜನೆ, ಪ್ರತಿಭೆ ಯೋಜನೆಗಳು ಒಳಗೊಂಡಿವೆ.

ಯೋಜನೆಗಳಿಗೆ 2025-26ನೇ ಸಾಲಿಗೆ ವಿಕಲಚೇತನ ಫಲಾನುಭವಿಗಳು ಆನ್‌ಲೈನ್ ಸೇವಾ ಸಿಂಧು ತಂತ್ರಾಂಶದ ಮೂಲಕ ಗ್ರಾಮ ಒನ್, ಮತ್ತು ಕರ್ನಾಟಕ ಒನ್ ಹಾಗೂ ನೇರವಾಗಿಯು ಸಹ ವಿಕಲಚೇತನರ ವ್ಯಕ್ತಿಗಳು ಅರ್ಜಿ ಸಲ್ಲಿಸಲು ಸೇವಾ ಸಿಂಧು (https://sevasindhu.karnataka.gov.in/Sevasindhu/Kannda) ಪೋರ್ಟಲ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ:15/10/2025 ರವರೆಗೆ ದಿನಾಂಕವನ್ನು ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲೆಯ ತಾಲೂಕು ಪಂಚಾಯತ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಮ್.ಆರ್.ಡಬ್ಲ್ಯೂ ಖಾಜಾಬಹುಸೇನ ಕಾತರಕಿ, ತಾಲೂಕು ಪಂಚಾಯತ್ ಗದಗ 8867556465, ಬಸವರಾಜ್ ಓಲಿ, ತಾಲೂಕು ಪಂಚಾಯತ್, ರೋಣ-9741615926, ಶಶಿಕಲಾ ವಡ್ಡಟ್ಟಿ, ತಾಲೂಕು ಪಂಚಾಯತ್, ಮುಂಡರಗಿ:9611922445, ಭಾರತಿ ಮುರಶಿಳ್ಳಿ, ತಾಲೂಕು ಪಂಚಾಯತ್, ಶಿರಹಟ್ಟಿ 8951128679 ಶಿವಾನಂದ ಹಾದಿಮನಿ, ತಾಲೂಕು ಪಂಚಾಯತ್, ನರಗುಂದ:9591679022 ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಗದಗ ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ: 029 ರ ದೂರವಾಣಿ ಸಂಖ್ಯೆ: 08372-220419 ಮೂಲಕ ಸಂಪರ್ಕಿಸಬಹುದು ಎಂದು ಅಂಗವಿಕಲರ ಕಲ್ಯಾಣಾಧಿಕಾರಿಗಳಾದ ಕೆ. ಮಹಾಂತೇಶ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾನೂನು ಅರಿವು ಅವಶ್ಯಕ

**■ವಿಜಯಸಾಕ್ಷಿ ಸುದ್ದಿ, ಗದಗ**

ಹುಲಕೋಟಿಯ ಕೃಷಿ ವಿಜ್ಞಾನ ಕೇಂದ್ರದಲ್ಲಿ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವಿಕೆ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮ ಜರುಗಿತು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮತ್ತು ದಿವಾಣಿ ನ್ಯಾಯಾಧೀಶರಾದ ಸಿ.ಎಸ್. ಶಿವನಗೌಡರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಮಹಿಳೆಯರಿಗೆ ಮತ್ತು ಮಕ್ಕಳಿಗಾಗಿ ಹಲವಾರು ಕಾನೂನುಗಳಿದ್ದು, ಅವುಗಳ ಅರಿವು ಅವಶ್ಯಕವಾಗಿದೆ. ಮಹಿಳೆಯರ, ಮಕ್ಕಳ ಅನೈತಿಕ ಸಾಗಾಣಿಕೆ ಬಗ್ಗೆ ಜಾಗರೂಕರಾಗಿರಬೇಕು ಎಂದು ತಿಳಿಸಿದರು.

ಉಪ ಪೊಲೀಸ್ ವರಿಷ್ಠಾಧಿಕಾರಿ ಮಹಾಂತೇಶ ಸಜ್ಜನರ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ಬಗ್ಗೆ ಜನರಿಗೆ ಅರಿವಿನ ಅವಶ್ಯಕತೆ ಇದೆ ಎಂದು ಹೇಳಿದರು.



ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕೆ.ವಿ.ಕೆ ಮುಖ್ಯಸ್ಥರಾದ ಸುಧಾ ಮಂಕಣಿ ಮಾತನಾಡಿ, ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ಒಂದು ಸಾಮಾಜಿಕ ಪಿಡುಗಾಗಿದೆ ಎಂದರು.

ಮಧುಸೂಧನ್ ಬಿ.ಆರ್ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಪದ್ಮಾವತಿ ಜಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಅನುಪಮಾ ಅಂಗಡಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಭಾಗೀದಾರ ಇಲಾಖೆಗಳ ಸಿಬ್ಬಂದಿಗಳು ಹಾಜರಿದ್ದರು.

### ತಾಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ದಸರಾ ಕವಿಗೋಷ್ಠಿ

# ಕವಿಗಳು ಉತ್ತಮ ಸಂದೇಶ ನೀಡಬೇಕು

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಅಗ್ನಿ ಸೋಮೇಶ್ವರ ದೇವಸ್ಥಾನದ ಹತ್ತಿರ ಲಕ್ಷ್ಮೇಶ್ವರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಶುಕ್ರವಾರ ಸಂಜೆ ಆಯೋಜಿಸಲಾಗಿದ್ದ ದಸರಾ ಕವಿಗೋಷ್ಠಿಯಲ್ಲಿ 15ಕ್ಕೂ ಅಧಿಕ ಕವಿಗಳು ತಾವು ರಚಿಸಿದ ವಿಶಿಷ್ಟ, ವಿಭಿನ್ನ ಕವನಗಳನ್ನು ವಾಚಿಸುವ ಮೂಲಕ ಗಮನ ಸೆಳೆದರು.



ಕಾರ್ಯಕ್ರಮವನ್ನು ನಿವೃತ್ತ ಶಿಕ್ಷಕ ಎಂ.ಎಂ. ಮಠದ ಉದ್ಘಾಟಿಸಿ ಮಾತನಾಡಿ, ಕವಿಗಳು ಸಮಾಜದ ಓರೆ-ಕೋರೆಗಳನ್ನು ತಿದ್ದುವದರ ಜೊತೆಗೆ ಒಂದು ಒಳ್ಳೆಯ ಸಂದೇಶವನ್ನು ನೀಡುವಂತಿರಬೇಕು. ದಸರಾ ಸಂದರ್ಭದಲ್ಲಿ ಕವಿಗೋಷ್ಠಿಯನ್ನು ಏರ್ಪಡಿಸಿರುವದು ಸ್ತುತ್ಯಾರ್ಹ ಕಾರ್ಯವಾಗಿದೆ. 12ನೇ ಶತಮಾನಕ್ಕೆ ಸೇರಿದ ಅಗ್ನಿಸೋಮೇಶ್ವರ ದೇವಸ್ಥಾನ ಲಕ್ಷ್ಮೇಶ್ವರದ ಪುರಾತನ ಸಂಸ್ಕೃತಿಯ ಪ್ರತೀಕವಾದದ್ದು, ಇಲ್ಲಿ ನಿರಂತರ ಸಾಹಿತ್ಯ, ಸಂಸ್ಕೃತಿಕ ಹಾಗೂ ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸುತ್ತಾ ಬರುತ್ತಿದ್ದೇವೆ. ಅದಕ್ಕೆ ಪೂರಕವಾಗಿ ಲಕ್ಷ್ಮೇಶ್ವರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಕೂಡ ಕೈಜೋಡಿಸಿರುವುದು ನಮಗೆಲ್ಲ ಹೆಮ್ಮೆ ತಂದಿದೆ ಎಂದರು.

ಕವಿಗೋಷ್ಠಿಯ ಅಧ್ಯಕ್ಷತೆ ವಹಿಸಿದ್ದ ಮಕ್ಕಳ ಸಾಹಿತ್ಯ ಪರಿಷತ್ತು ಅಧ್ಯಕ್ಷ ನಾಗರಾಜ ಹಣಗಿ ಮಾತನಡಿ, ಕಾವ್ಯವೆಂಬುದು ಬುದ್ಧಿ-ಭಾವಗಳ ಸಂಗಮ. ಕಾವ್ಯವು ಸಾಹಿತ್ಯದ ಅತ್ಯಂತ ಪರಿಣಾಮಕಾರಿ ಪ್ರಕಾರ. ಮಹಾಕಾವ್ಯಗಳು ನಮ್ಮ ಕನ್ನಡದ ಶ್ರೇಷ್ಠ ಸಂಕೇತಗಳಾಗಿವೆ ಎಂದು ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಲಕ್ಷ್ಮೇಶ್ವರ ತಾಲೂಕು ಕಸಾಪ ಅಧ್ಯಕ್ಷ ಈಶ್ವರ ಮೆಡ್ಲೇರಿ, ಲಕ್ಷ್ಮೇಶ್ವರ ತಾಲೂಕ ಕಸಾಪ ಘಟಕ ಈಗಾಗಲೇ ಎಲ್ಲರ ಸಹಕಾರ, ಮಾರ್ಗದರ್ಶನದೊಂದಿಗೆ 154 ಕಾರ್ಯಕ್ರಮಗಳನ್ನ ಯಶಸ್ವಿಯಾಗಿ ಸಂಘಟನೆ ಮಾಡಿ ಮುನ್ನಡೆದಿದೆ. ದತ್ತಿ ಉಪನ್ಯಾಸಗಳು, ಮನೆ ಕನ್ನಡ-ಮನ ಕನ್ನಡ ಕಾರ್ಯಕ್ರಮ ಸರಣಿ, ಮಾಸದ ಮಾತು ಕಾರ್ಯಕ್ರಮ ಸರಣಿ, ಸಾಹಿತ್ಯ ಸಮ್ಮೇಳನಗಳು, ಬೇಸಿಗೆ ಶಿಬಿರಗಳು ಮುಂತಾದ ವಿಶಿಷ್ಟ ಕಾರ್ಯಕ್ರಮಗಳನ್ನು ಎಲ್ಲರ ಸಹಕಾರದೊಂದಿಗೆ ನಿರಂತರವಾಗಿ ಸಂಘಟನೆ ಮಾಡಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ವಿಜಯಕುಮಾರ ಹಿರೇಮಠ, ಮುಖ್ಯ ಅತಿಥಿಗಳಾಗಿ ಎಸ್.ಎ. ಬಣಗಾರ, ನಿಂಗಪ್ಪ ಗೊರವರ, ಬಸವರಾಜ ಬೆಲಹುಣಸಿ, ಸುರೇಶ ತಂಗೋಡ, ರಮೇಶ ರಿತ್ತಿ, ಎಸ್.ಬಿ. ಕದಡಿ ಉಪಸ್ಥಿತರಿದ್ದರು. ರವಿರಾಜ ಶಿಗ್ಲಿ ಭಾವಗೀತೆ, ತತ್ವಪದಗಳನ್ನು ಹಾಡಿ ಗಾನ ದಸರಾ ಕಾರ್ಯಕ್ರಮ ನಡೆಸಿಕೊಟ್ಟರು.

ಕಾರ್ಯದರ್ಶಿ ಮಂಜುನಾಥ ಚಾಕಲಬ್ಬಿ ಸ್ವಾಗತಿಸಿದರು. ಉಪನ್ಯಾಸಕ ತಮ್ಮನಗೌಡ ಪಾಟೀಲ ನಿರೂಪಿಸಿದರು. ಸಂಘಟನಾ ಕಾರ್ಯದರ್ಶಿ ನಾಗರಾಜ ಮಜ್ಜಿಗುಡ್ಡ, ಶಿಕ್ಷಕರಾದ ಶ್ರೀಪಾಲ ಗೋಂಗಡಿ, ಆರ್.ಪಿ. ರಾಯಚೂರ, ಶಂಕರ ನಿರ್ವಹಿಸಿದರು, ಭೂಪಾಲ ಘೋಂಗಡಿ ವಂದಿಸಿದರು.

ಪ್ರಭಾವತಿ ಹಿರೇಮಠ, ಸವಿತಾ ಕಳಸಾಪುರ, ಪ್ರತಿಭಾ ಶಿಳ್ಳಿನ, ವಿ.ಎಮ್. ಹೂಗಾರ, ಜೀವನ್ ಸಾತಪುತೆ, ಪಿ.ಪಿ. ಹಿರೇಮಠ, ಪಾರ್ವತಿ ಪಾಟೀಲ ಮುಂತಾದವರು ಹಾಜರಿದ್ದರು.

# ಪ್ರಾಮಾಣಿಕ ಜೀವನ ನಮ್ಮದಾಗಬೇಕು



**■ವಿಜಯಸಾಕ್ಷಿ ಸುದ್ದಿ, ಗದಗ**

ಅನಾವಶ್ಯಕ ವಿಷಯಗಳಿಗೆ ಗಮನ ನೀಡದೆ, ಪುಸ್ತಕ ಓದುವುದಕ್ಕೆ ಹೆಚ್ಚಿನ ಸಮಯವನ್ನು ನೀಡಬೇಕೆಂದು ಪ್ರೊ. ಬಾಹುಬಲಿ ಜೈನರ್ ಹೇಳಿದರು.

ಅವರು ಶುಕ್ರವಾರ ತಾಲೂಕಿನ ಅಡವಿಸೋಮಾಪೂರ ಗ್ರಾಮದ ಮಲ್ಲಿಕಾರ್ಜುನ ಸಮುದಾಯ ಭವನದಲ್ಲಿ ಜರುಗಿದ ಉಪನ್ಯಾಸ ಸಮಾರಂಭದಲ್ಲಿ 'ರಾಷ್ಟ್ರ ನಿರ್ಮಾಣದಲ್ಲಿ ಯುವಕರ ಪಾತ್ರ' ವಿಯದ ಕುರಿತು ಮಾತನಾಡಿದರು.

ನಮ್ಮ ಹಿರಿಯರು ಹಾಕಿಕೊಟ್ಟ ಪದ್ಧತಿ ಮತ್ತು ವೈಜ್ಞಾನಿಕ ಕಾರಣಗಳು ಹಾಗೂ ಗ್ರಾಮೀಣ ಭಾಗದಜೀವನ ಶೈಲಿ ಮರೆಯದೆ ನಮ್ಮ ಜೀವನದುದ್ದಕ್ಕೂ ಅಳವಡಿಸಿಕೊಳ್ಳಬೇಕು. ಜೀವನ ಮೌಲ್ಯಗಳು, ಆತ್ಮವಿಶ್ವಾಸ, ನಮ್ಮನ್ನು ನಾವು ಗೌರವಿಸಿಕೊಳ್ಳುವ ಮೂಲಕ ಪ್ರಾಮಾಣಿಕವಾದ ಜೀವನ ನಮ್ಮದಾಗಬೇಕೆಂದು ಹೇಳಿದರು.


ನಾಯಕ ಅಂದರೆ ದೊಡ್ಡ ದೊಡ್ಡ ವ್ಯಕ್ತಿಯಾಗುವುದು ಅಲ್ಲ. ಮತ್ತೊಬ್ಬರ ಬಗೆಗೆ ಕೊಟ್ಟೆಕಿಚ್ಚು ಪಡದೆ ನಮ್ಮ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳಬೇಕು. ಜೀವನದಲ್ಲಿ ಆರಾಮವಾಗಿ ಇರಬೇಕಾದರೆ ಕೆಟ್ಟ ಆಲೋಚನೆಯನ್ನು ಬಿಡಬೇಕು ಎಂದರಲ್ಲದೆ, ನೂರಾರು ಸಸಿಗಳನ್ನು ನೆಟ್ಟು ಬೆಳೆಸಿದ ವೃಕ್ಷಮಾತೆ ಸಾಲು ಮರದ ತಿಮ್ಮಕ್ಕ ಅವರ ಬಗ್ಗೆ ಹಾಡಿನ ಮೂಲಕ ವಿವರವಾಗಿ ತಿಳಿಸಿದರು. ಯುವ ಪೀಳಿಗೆ ಮತ್ತು ಯುವಕರ ಸರ್ವತೋಮುಖ ಅಭಿವೃದ್ಧಿಯಲ್ಲಿ ದೇಶದ ಭವಿಷ್ಯ ಅಡಗಿದೆ. ಯುವಕರು ಉತ್ಸಾಹಿಗಳಾಗಿ, ಉತ್ತಮ ಕೌಶಲ್ಯವನ್ನು ಹೊಂದಬೇಕೆಂದು ಹೇಳಿದರು.

ಶಿಬಿರಾಧಿಕಾರಿ ಪ್ರದೀಪ ನಾಯಕ, ವೀರೇಶ ಅಂಗಡಿ ಮಾತನಾಡಿ, ಸಾಧಿಸುವವರಿಗೆ ಸಾಕಷ್ಟು ಸಮಸ್ಯೆಗಳು ಅಡ್ಡಿಯಾಗುತ್ತವೆ. ಅವುಗಳಿಗೆ ಸೂಕ್ತ ಪರಿಹಾರವನ್ನು ಕಂಡುಕೊಳ್ಳಬೇಕು ಎಂದರು.

ನಿವೃತ್ತ ಪ್ರಾಚಾರ್ಯ ಉಮೇಶ ಹಿರೇಮಠ, ಪ್ರೊ. ಬಾಹುಬಲಿ ಜೈನರ್, ಶಿವಾನಂದ ಕೊರವರ ಅವರನ್ನು ಸನ್ಮಾನಿಸಲಾಯಿತು. ವೇದಿಕೆಯಲ್ಲಿ ನವೀನ ಕುಂಬಾರ ಸೇರಿದಂತೆ ಮಹಾವಿದ್ಯಾಲಯದ ಸಿಬ್ಬಂದಿ ವರ್ಗ, ಗ್ರಾಮದ ಹಿರಿಯರು ಇದ್ದರು.

# ಪ್ರತಿಯೊಬ್ಬರೂ ಸಮೀಕ್ಷೆಯಲ್ಲಿ ಪಾಲ್ಗೊಳ್ಳಿ

**■ವಿಜಯಸಾಕ್ಷಿ ಸುದ್ದಿ, ಗದಗ**



ರಾಜ್ಯ ಸರ್ಕಾರವು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಮೂಲಕ ನಡೆಸುತ್ತಿರುವ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ ವೇಳೆ ರಾಜ್ಯದಲ್ಲಿರುವ ಎಲ್ಲ ಮುಸ್ಲಿಂ ಸಮುದಾಯದವರು ಕಡ್ಡಾಯವಾಗಿ ಧರ್ಮದ ಕಾಲಂನಲ್ಲಿ 'ಇಸ್ಲಾಂ' ಎಂದು, ಜಾತಿ ಕಾಲಂನಲ್ಲಿ 'ಮುಸ್ಲಿಂ' ಎಂದು ಹಾಗೂ ಉಪಜಾತಿ ಕಾಲಂನಲ್ಲಿ (ಕೆಟಗರಿಯಲ್ಲಿ ಲಾಭ ಪಡೆಯುವವರನ್ನು ಹೊರತುಪಡಿಸಿ) ಉಳಿದೆಲ್ಲವರು 'ಮುಸ್ಲಿಂ' ಎಂದು ನಮೂದಿಸಲು ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾದ ರಾಜ್ಯಾಧ್ಯಕ್ಷ ಮಹ್ಮದಶಫಿ ಎಸ್ ನಾಗರಕಟ್ಟಿ ಮನವಿ ಮಾಡಿದ್ದಾರೆ.

ಇಂಥಹ ಸಮೀಕ್ಷೆಯಿಂದ ಎಲ್ಲ ಧರ್ಮದಲ್ಲಿರುವ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಬಗ್ಗೆ ಮಾಹಿತಿ ಲಭ್ಯವಾಗಲಿದೆ. ಅದಕ್ಕಾಗಿ ಸಮಸ್ತ ಮುಸ್ಲಿಂ ಬಾಂಧವರು ಯಾವುದೇ ಗೊಂದಲಕ್ಕೆ ಒಳಗಾಗದೆ ಪ್ರತಿಯೊಬ್ಬರೂ ಈ ಸಮೀಕ್ಷೆಯಲ್ಲಿ ಪಾಲ್ಗೊಂಡು ಸರಿಯಾಗಿ, ನಿಖರವಾಗಿ ಮಾಹಿತಿಗಳನ್ನು ಅಧಿಕಾರಿಗಳಿಗೆ ನೀಡಬೇಕು. ವಿಶೇಷವಾಗಿ ಧರ್ಮದ ಕಾಲಂನಲ್ಲಿ 'ಇಸ್ಲಾಂ' ಅಂತ ಬರೆಸಬೇಕು. ಜಾತಿ ಕಾಲಂನಲ್ಲಿ 'ಮುಸ್ಲಿಂ' ಅಂತ ಬರೆಸಬೇಕು ಹಾಗೂ ಉಪಜಾತಿ ಕಾಲಂನಲ್ಲಿ (ಈಗಾಗಲೇ ಕೆಟಗೇರಿಯಲ್ಲಿ ಲಾಭ ಪಡೆಯುತ್ತಿರುವರು ಅವರ ತಮ್ಮ ತಮ್ಮ ಉಪ ಜಾತಿಯನ್ನು ಬರೆಸಬೇಕು) ಇವರನ್ನು ಹೊರತುಪಡಿಸಿ ಉಳಿದವರೆಲ್ಲರೂ 'ಮುಸ್ಲಿಂ' ಅಂತ ಬರೆಸಬೇಕು. ಕುಟುಂಬದ ಕುಲಕಸುಬು ಕಾಲಂನಲ್ಲಿ ತಮ್ಮ ಕುಟುಂಬದ ಕುಲಕಸುಬು ಸರಿಯಾಗಿ ನಮೂದಿಸಬೇಕೆಂದು ಮನವಿ ಮಾಡಿದ್ದಾರೆ.



ಗದಗ: ದಸರಾ ಹಬ್ಬದ ಸಂಭ್ರಮದ ನಿಮಿತ್ತ ಗದಗ ನಗರದ ವಿಡಿಎಸ್ ಕ್ಲಾಸಿಕ್ ಆಂಗ್ಲ ಮಾಧ್ಯಮ ಸಿಬಿಎಸ್‌ಇ ಶಾಲೆಯ ಗುರು ಮಾತೆಯರು ನವರಾತ್ರಿಯ ಐದನೇ ದಿನದಂದು ಹಸಿರು ವರ್ಣದ ಸೀರೆಯನ್ನುಟ್ಟು ಸಂಭ್ರಮಿಸಿದರು.

## ನೂತನ ಗೋಪುರ ನಿರ್ಮಾಣಕ್ಕೆ ಚಾಲನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶ್ರೀ ಪಂ. ಪುಟ್ಟರಾಜ ನಗರದಲ್ಲಿರುವ ಶ್ರೀ ಸಿದ್ಧಿವಿನಾಯಕ ದೇವಸ್ಥಾನದಲ್ಲಿ ಟ್ರಸ್ಟ್ ಕಮಿಟಿಯಿಂದ ಶ್ರೀದೇವಿ ಪುರಾಣ ಪ್ರಾರಂಭವಾಗಿದ್ದು. ಪ್ರತಿದಿನ ಸಂಜೆ 7ರಿಂದ 8.30 ಗಂಟೆಯವರೆಗೆ ನಿವೃತ್ತ ಉಪನ್ಯಾಸಕ ಶಿವಾನಂದ ಹೊಂಬಳ ಅವರು ಪ್ರವಚನ ಮಾಡುತ್ತಿದ್ದಾರೆ. ಅಕ್ಟೋಬರ್ 2ರಂದು ಬೆಳಿಗ್ಗೆ 11 ಗಂಟೆಗೆ ಸಿದ್ಧಿವಿನಾಯಕ ದೇವಸ್ಥಾನದ ಹಾಗೂ ಶ್ರೀ ಮಾರುತಿ ದೇವಸ್ಥಾನದ ನೂತನ ಗೋಪುರ ನಿರ್ಮಾಣದ ಚಾಲನಾ ಸಮಾರಂಭ, ಶ್ರೀದೇವಿಯ ಪುರಾಣ ಮಹಾಮಂಗಲ ಮತ್ತು ಮಹಿಳೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಜರುಗಲಿದೆ. ಈ ಕಾರ್ಯಕ್ರಮದಲ್ಲಿ ಶ್ರೀ ವಿರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಪೂಜ್ಯಶ್ರೀ ಕಲ್ಲಯ್ಯಜ್ಜನವರು ಸಾನ್ನಿಧ್ಯ ವಹಿಸುವರು. ಅನ್ನಪೂರ್ಣೇಶ್ವರಿ ಮಂದಿರ ಧರ್ಮದರ್ಶಿ ಮಹೇಶ್ವರಸ್ವಾಮಿಗಳು ಹೊಸಳ್ಳಿಮಠ ಅವರು ಸಮ್ಮುಖ ವಹಿಸುವರು. ಅತಿಥಿಗಳಾಗಿ ಹಿರಿಯ ಸಾಹಿತಿ ಟಿ.ವಿ. ಮಾಗಳದ ಆಗಮಿಸುವರು. ಶ್ರೀ ಸಿದ್ಧಿವಿನಾಯಕ ದೇವಸ್ಥಾನ ಟ್ರಸ್ಟ್ ಕಮಿಟಿಯ ಅಧ್ಯಕ್ಷ ಉಮೇಶಗೌಡ ಪಾಟೀಲ ಅವರು ಅಧ್ಯಕ್ಷತೆ ವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

## ಧರ್ಮದ ಕಾಲಂನಲ್ಲಿ ಲಿಂಗಾಯತ ಧರ್ಮ ಅಂತನೇ ಬರೆಸ್ತೇನೆ: ಎಂ.ಬಿ ಪಾಟೀಲ್

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಕುರಿತು ಸಚಿವ ಎಂ.ಬಿ ಪಾಟೀಲ್ ಪ್ರತಿಕ್ರಿಯೆ ಕೊಟ್ಟಿದ್ದಾರೆ. ಈ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ನಾನು ಬಸವ ಧರ್ಮದ ಪರ ಇರುವವನು, ಧರ್ಮದ ಕಾಲಂ ನಲ್ಲಿ ಲಿಂಗಾಯತ ಧರ್ಮ ಅಂತನೇ ಬರೆಸ್ತೇನೆ. ಲಿಂಗಾಯತ ಧರ್ಮ ಆದ್ರೆ ವೀರಶೈವ ಅದರ ಒಂದು ಭಾಗ ಎಂದು ತಿಳಿಸಿದರು.

### ವಿದ್ಯಾರ್ಥಿ ಪ್ರೇರಣಾ ಶಿಬಿರದಲ್ಲಿ ಅಗ್ನಿಶಾಮಕ ಡಿಐಜಿಪಿ ರವಿ ಚನ್ನಣ್ಣವರ ಕಿವಿಮಾತು

## ಎತ್ತರಕ್ಕೆ ಬೆಳೆದೆನೆಂದು ಅಹಂಕಾರ ತೋರದಿರಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮನುಷ್ಯ ಜೀವನದಲ್ಲಿ ಹಿಮಾಲಯದೆತ್ತರಕ್ಕೆ ಬೆಳೆದರೂ ಅವನ ಕಾಲು ನೆಲದ ಮೇಲಿರಬೇಕು. ಅಂದರೆ ಅವನ ವ್ಯಕ್ತಿತ್ವಕ್ಕೊಂದು ಅರ್ಥ ಬರುತ್ತದೆ. ಬದಲಾಗಿ ಬೆಳೆದೆನೆಂದು ಅಹಂಕಾರ ತೋರಿದರೆ ಅಂದೇ ಅವನ ಅವನತಿ ಪ್ರಾರಂಭವಾಗುತ್ತದೆ. ಆದ್ದರಿಂದ ವಿನಯವಂತಿಕೆಯನ್ನು, ವಿಧೇಯತೆಯನ್ನು ಜೀವನದಲ್ಲಿ ರೂಢಿಸಿಕೊಳ್ಳಿ ಎಂದು ಅಗ್ನಿಶಾಮಕ ಡಿಐಜಿಪಿ ರವಿ ಚನ್ನಣ್ಣವರ ಹೇಳಿದರು.

ಪಟ್ಟಣದ ಎಸ್‌ಎ ಪಿಯು ಕಾಲೇಜಿನಲ್ಲಿ ಬೀಚಿ ಬಳಗ ಮತ್ತು ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಗಳ ಸಂಯುಕ್ತ ಆಶ್ರಯದಲ್ಲಿ ಜರುಗಿದ ವಿದ್ಯಾರ್ಥಿ ಪ್ರೇರಣಾ ಶಿಬಿರದಲ್ಲಿ ಅವರು ಮಾತನಾಡಿದರು.

ಎಂದಿಗೂ ಇದು ನನ್ನಿಂದಾಗದು ಎನ್ನಬೇಡಿ. ಮನುಷ್ಯನನ್ನು ಸೋಲಿಸುವ ಯಾವ ವಸ್ತುವೂ ಈ ಭೂಮಿಯ ಮೇಲಿಲ್ಲ. ಸಾಧಿಸಲು ಮನಸ್ಸು ಮಾಡಿ, ಗುರಿಯ ಬೆನ್ನು ಹತ್ತಿ ಅದೇ ನಿಮ್ಮನ್ನು ತನ್ನೆಡೆಗೆ ಕರೆದುಕೊಂಡು ಹೋಗುತ್ತದೆ. ಸಮಾಜದಲ್ಲಿನ ಎಲ್ಲರಿಂದ ಕಲಿಯುವುದು ಬಹಳಷ್ಟಿದೆ. ಅದನ್ನು ಕಲಿಯಿರಿ. ನಿಮ್ಮೊಳಗೆ ನೀವು ಸೋಲನ್ನು ಒಪ್ಪಿಕೊಳ್ಳದ ಹೊರತು ಯಾರೂ ನಿಮ್ಮನ್ನು ಸೋಲಿಸಲಾರರು ಎಂಬುದನ್ನು




ನೆನಪಿನಲ್ಲಿಡಿ. ಮಾಡುವ ಕೆಲಸದಲ್ಲಿ ಯಾವುದೂ ಕನಿಷ್ಠ, ಶ್ರೇಷ್ಠವೆಂಬುದಿಲ್ಲ. ಮಾಡುವುದನ್ನು ಮಾತ್ರ ಅತ್ಯಂತ ಶ್ರದ್ಧೆಯಿಂದ ಮಾಡಿದರೆ ನೀವು ಯಶಸ್ಸಿನ ತುತ್ತ ತುದಿಯಲ್ಲಿರುತ್ತೀರಿ ಎಂದು ಹೇಳಿದರು.

ಮಾನಸಿಕ ಗುಲಾಮಗಿರಿಯಿಂದ ಹೊರಬನ್ನಿರಿ. ಒಮ್ಮೆ ನೀವು ವಿದ್ಯಾರ್ಥಿ ಜೀವನವನ್ನು ಹಾಳುಮಾಡಿಕೊಂಡರೆ ಆಮೇಲೆ ಏನು ಮಾಡಿದರೂ ನಿಮ್ಮ ಭವಿಷ್ಯವನ್ನು ಸರಿಪಡಿಸಲು ಸಾಧ್ಯವಿಲ್ಲ. ಜೀವನಪರ್ಯಂತ ನೀವು ಗೋಳಾಡಬೇಕಾಗುತ್ತದೆ. ಈ ಜಗತ್ತಿನಲ್ಲಿ ಸಾಧಕರ ಹೆಸರು ಮಾತ್ರ ಅಜರಾಮರವಾಗಿರುತ್ತದೆ. ನೀವು ಗಟ್ಟಿ ಮನಸ್ಸು ಮಾಡಿ ಸಾಧನೆಯತ್ತ ದಿಟ್ಟ ಹೆಜ್ಜೆಯನ್ನಿಡಿ. ಬಡವರ ಬಗ್ಗೆ ಕನಿಕರವಿರಲಿ. ಕನಿಷ್ಠ ಹತ್ತು ಜನ ಸಾಧಕರ ಚರಿತ್ರೆಯನ್ನು ಓದಿ. ಇದರಿಂದ ಸಾಧಿಸಬೇಕೆನ್ನುವ ಛಲ, ಸ್ಫೂರ್ತಿ ತಾನಾಗಿಯೇ ಬರುತ್ತದೆ. ನಿಮ್ಮ ತಂದೆ-ತಾಯಿಗೆ ಮೊದಲ ಆದ್ಯತೆ ನೀಡಿ. ಅವರನ್ನು ಶ್ರದ್ಧೆಯಿಂದ ನೋಡಿಕೊಳ್ಳಿ ಎಂದು ಕಿವಿಮಾತು ಹೇಳಿದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಶ್ರೀ ಮುಪ್ಪಿನ ಬಸವಲಿಂಗ ಶ್ರೀಗಳವರು ಆಶೀರ್ವಚನ ನೀಡಿ, ನಿಶ್ಚಿತ ಗುರಿಯೊಂದಿಗೆ ನಿಶ್ಚಿತ ಮನಸ್ಸಿಟ್ಟು ಅಭ್ಯಾಸ ಮಾಡಿ. ಸೋಲು ನಿಮ್ಮ ಬಳಿ ಸುಳಿಯದು ಎಂದರು. ಮಿಥುನ ಪಾಟೀಲ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು. ಕೆ.ಎಸ್. ಕಳಕಣ್ಣವರ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಶಿಕ್ಷಕ ಸಂಗಮೇಶ ಹೂಲಗೇರಿ ನಿರೂಪಿಸಿದರು. ಎಂ.ಎಸ್. ದಢೇಸೂರಮಠ ಸ್ವಾಗತಿಸಿದರು. ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ವೇದಿಕೆಯ ಮೇಲೆ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ಆಡಳಿತಾಧಿಕಾರಿ ಎನ್.ಆರ್. ಗೌಡರ, ಅಧ್ಯಕ್ಷ ಡಾ. ಎಸ್.ಎ. ಪಾಟೀಲ ಉಪಸ್ಥಿತರಿದ್ದರು. ಡಾ. ಕಲ್ಲಯ್ಯ ಹಿರೇಮಠ, ಮುಖ್ಯ ಶಿಕ್ಷಕ ಬಿ.ಬಿ. ಕುರಿ ನಿರ್ವಹಿಸಿದರು.

> ಜೀವನದಲ್ಲಿ ಬಡತನ, ಸಿರಿತನ ಎಂದಿಗೂ ಶಾಶ್ವತವಲ್ಲ. ನಿಮ್ಮ ಮುಂದೆ ಗುರಿಯಿರಬೇಕು, ಮನದಲ್ಲಿ ಅದನ್ನು ಸಾಧಿಸುವ ಛಲ ಇರಬೇಕು. ಅದರೊಂದಿಗೆ ಪ್ರಾಮಾಣಿಕ ಪರಿಶ್ರಮವೂ ಬೆರೆತರೆ ನಿಮ್ಮನ್ನು ಹಿಡಿಯುವವರೇ ಇಲ್ಲ. ಈಗ ನಿಮ್ಮ ಜೀವನದ ತುಂಬ ಬರೀ ಶಿಕ್ಷಣದ ಕನಸೇ ತುಂಬಿರಬೇಕು. ಅದನ್ನು ನನಸು ಮಾಡಿಕೊಳ್ಳುವತ್ತ ಲಕ್ಷ್ಯ ವಹಿಸಿ ತಪಸ್ಸಿನಂತೆ ಅಧ್ಯಯನವನ್ನು ಮಾಡಿದರೆ ನಿಮಗೆ ಯಶಸ್ಸು ಕಟ್ಟಿಟ್ಟ ಬುತ್ತಿ.
>
> – ರವಿ ಚನ್ನಣ್ಣವರ. ಡಿಐಜಿಪಿ, ಅಗ್ನಿಶಾಮಕ ದಳ.

### ನಿವೃತ್ತಿ ಹೊಂದಿದ ಖಜಾನೆ ಅಪರ ನಿರ್ದೇಶಕ ಸುರೇಶ ಹಳ್ಯಾಳರಿಗೆ ಬೀಳ್ಕೊಡುಗೆ

## ನೌಕರರು ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಳ್ಳಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸರಕಾರಿ ಅಧಿಕಾರಿ, ಸಿಬ್ಬಂದಿಗಳು ತಮ್ಮ ಸೇವಾ ಅವಧಿಯಲ್ಲಿ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡು ಕಾರ್ಯನಿರ್ವಹಿಸುವಂತೆ ನಿವೃತ್ತ ಖಜಾನೆ ಅಪರ ನಿರ್ದೇಶಕ ಸುರೇಶ ಹಳ್ಯಾಳ ತಿಳಿಸಿದರು.

ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಗದಗ ಜಿಲ್ಲಾ ಖಜಾನೆ ನೌಕರರ ಘಟಕದ ವತಿಯಿಂದ ಜರುಗಿದ ಸನ್ಮಾನ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಸರಕಾರಿ ಸೇವೆ ದೇವರ ಸೇವೆ ಎಂಬಂತೆ ಪ್ರತಿಯೊಬ್ಬ ಸರಕಾರಿ ಅಧಿಕಾರಿ, ಸಿಬ್ಬಂದಿಗಳು ನಿಸ್ವಾರ್ಥ ಸೇವಾ ಮನೋಭಾವನೆಯೊಂದಿಗೆ ಸರಕಾರದ ಯೋಜನೆಗಳನ್ನು ತಲುಪಿಸಲು ಮುಂದಾಗಬೇಕು. ಖಜಾನೆ ಇಲಾಖೆ ಒಂದು ಪ್ರಮುಖ ಇಲಾಖೆಯಾಗಿದ್ದು, ಇಲ್ಲಿ ಕಾರ್ಯದ ಒತ್ತಡ ಸಹಜ. ಎಂತಹ ಒತ್ತಡದ



ಪರಿಸ್ಥಿತಿಯಲ್ಲಿಯೂ ಸಹ ಕಚೇರಿಗೆ ಆಗಮಿಸುವ ಪ್ರತಿಯೊಬ್ಬರೊಂದಿಗೆ ಸೌಜನ್ಯಯುತವಾಗಿ ವರ್ತಿಸಿ ಅವರ ಕೆಲಸ-ಕಾರ್ಯಗಳನ್ನು ಮಾಡಿಕೊಟ್ಟಲ್ಲಿ ಸರಕಾರಿ ಕೆಲಸ ದೇವರ ಕೆಲಸ ಎಂಬ ನಾಣ್ಣುಡಿಗೆ ಅರ್ಥ ಬಂದತಾಗುತ್ತದೆ ಎಂದರು.

ಜಿಲ್ಲಾ ಪಂಚಾಯಿತಿ ಲೆಕ್ಕಾಧಿಕಾರಿ ಪ್ರಶಾಂತ ಜೆ.ಸಿ ಮಾತನಾಡಿ, ಖಜಾನೆ-2 ತಂತ್ರಾಂಶ ಅಭಿವೃದ್ಧಿಪಡಿಸುವಲ್ಲಿ ಸುರೇಶ ಹಳ್ಯಾಳ ಅವರ ಪಾತ್ರ ಮಹತ್ವದ್ದು ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ನಿಕಟಪೂರ್ವ ಜಿಲ್ಲಾ ಸರ್ಕಾರಿ ನೌಕರ ಸಂಘದ ಅಧ್ಯಕ್ಷ ಪ್ರೇಮನಾಥ ಗರಗ ಮಾತನಾಡಿ, ನಿವೃತ್ತ ಅಪರ ನಿರ್ದೇಶಕರು ಸೇವೆಯಲ್ಲಿದ್ದಾಗ ಅವರ ದಕ್ಷ ಆಡಳಿತ, ಪ್ರಾಮಾಣಿಕತೆ ಹಾಗೂ ಸಾರ್ವಜನಿಕರೊಂದಿಗಿನ ಅವರ ಆತ್ಮೀಯ ಸಂಬಂಧದ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು.

ಸರ್ಕಾರಿ ನೌಕರ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬಳ್ಳಾರಿ ಮಾತನಾಡಿ, ನಿವೃತ್ತ ಅಪರ ನಿರ್ದೇಶಕರ ನಿಸ್ವಾರ್ಥ ಸೇವಾ ಮನೋಭಾವನೆ, ಶಿಸ್ತು, ಸಮಯ ಪ್ರಜ್ಞೆ ಹಾಗೂ ಅವರ ಘನ ವ್ಯಕ್ತಿತ್ವಗಳ ಕುರಿತು ಅನಿಸಿಕೆ ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ಜಿಲ್ಲಾ ಖಜಾನೆ ಸಹಾಯಕ ನಿರ್ದೇಶಕ ಎಸ್.ಎಚ್. ಬಾದನಟ್ಟಿ, ಜಿಲ್ಲಾ ಅಕ್ಷರ ದಾಸೋಹ ಅಧಿಕಾರಿ ಸರಸ್ವತಿ ಡಿ.ಕನವಳ್ಳಿ, ಜಿಲ್ಲಾ ಖಜಾನೆ ಹಾಗೂ ಉಪ ಖಜಾನೆಗಳ ಅಧಿಕಾರಿ, ಸಿಬ್ಬಂದಿ, ಖಜಾನೆ ಇಲಾಖೆಯ ನಿವೃತ್ತ ಅಧಿಕಾರಿ-ಸಿಬ್ಬಂದಿಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

> ಜಿಲ್ಲಾ ಖಜಾನೆ ಉಪ ನಿರ್ದೇಶಕ ವಿ.ಹರಿನಾಥ ಬಾಬು ಮಾತನಾಡಿ, ನಿವೃತ್ತ ಖಜಾನೆ ಅಪರ ನಿರ್ದೇಶಕ ಸುರೇಶ ಹಳ್ಯಾಳ ಅವರು ತಮ್ಮ ವೃತ್ತಿ ಜೀವನದ ಬೆನ್ನೆಲುಬಿನಂತಿದ್ದರು. ಅವರು ತಮ್ಮ ವೃತ್ತಿ ಜೀವನದುದ್ದಕ್ಕೂ ಪ್ರತಿಯೊಬ್ಬರಿಗೂ ಮಾರ್ಗದರ್ಶಕರಾಗಿ, ಸ್ನೇಹಿತರಾಗಿ ಸಹಕರಿಸಿದರು. ಸುರೇಶ ಹಳ್ಯಾಳ ಅವರು ನಡೆದಾಡುವ ಖಜಾನೆಯಂತಿದ್ದರು ಎಂದು ಪ್ರಶಂಸೆ ವ್ಯಕ್ತಪಡಿಸಿದರು.

## ಅಂಗನವಾಡಿ ಕಟ್ಟಡ ನಿರ್ಮಾಣಕ್ಕೆ ಚಾಲನೆ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮಕ್ಕಳ ಶ್ರೇಯೋಭಿವೃದ್ಧಿಗಾಗಿ ತಾಲೂಕಿನ ನಾಗರಮಡುವು ಗ್ರಾಮದಲ್ಲಿ ನೂತನ ಅಂಗನವಾಡಿ ಕಟ್ಟಡ ನಿರ್ಮಾಣ ಮಾಡಲಾಗುತ್ತಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಶಿರಹಟ್ಟಿ ತಾಲೂಕಿನ ನಾಗರಮಡುವು ಗ್ರಾಮದಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ 23 ಲಕ್ಷ ರೂ ವೆಚ್ಚದಲ್ಲಿ ಅಂಗನವಾಡಿ ಕಟ್ಟಡ ನಿರ್ಮಾಣಕ್ಕೆ ಚಾಲನೆ ನೀಡಿ ಮಾತನಾಡಿದರು.

ಮಕ್ಕಳ ಶೈಕ್ಷಣಿಕ ಜೀವನ ಆರಂಭವಾಗುವುದು ಅಂಗನವಾಡಿ ಕೇಂದ್ರದಿಂದ. ಅವರಲ್ಲಿ ಕಲಿಕೆಯ ಆಸಕ್ತಿ ಹೆಚ್ಚಿಸಲು ಇದು ಪ್ರಮುಖ ಪಾತ್ರವಹಿಸುತ್ತದೆ. ಹೀಗಾಗಿ ಅವರ ಸರ್ವತೋಮುಖ ಬೆಳವಣಿಗೆಗಾಗಿ ಅಂಗನವಾಡಿ ಕಟ್ಟಡ ನಿರ್ಮಾಣಕ್ಕೆ ಮುಂದಾಗಿದ್ದು, ಶೀಘ್ರದಲ್ಲಿ ಉತ್ತಮ ಗುಣಮಟ್ಟದ ಕಾಮಗಾರಿ ಪೂರ್ಣಗೊಳಿಸಿ ಗ್ರಾಮದ ಮಕ್ಕಳಿಗೆ ವ್ಯವಸ್ಥೆಯನ್ನು ಕಲ್ಪಿಸಲಾಗುವುದು ಎಂದರು.

ಗ್ರಾ.ಪಂ ಅಧ್ಯಕ್ಷೆ ಕರೆವ್ವ ಹರಿಜನ, ಗಂಗಯ್ಯ ಹಿರೇಮಠ, ಉಪಾಧ್ಯಕ್ಷೆ ಮೀನಾಕ್ಷವ್ವ ಬೆಳಗಟ್ಟಿ, ಗಂಗಾಧರ ಸೂರಣಗಿ, ಬೀರಪ್ಪ ಆನೆಪ್ಪನವರ, ಹೇಮಾ ಪುಟ್ಟಮ್ಮನವರ, ಮಲ್ಲವ್ವ ಆನೆಪ್ಪನವರ, ರೇವಣಪ್ಪ ಆನೆಪ್ಪನವರ, ಬಸವರಾಜ ಬೆಳಗಟ್ಟಿ, ವೀರಭದ್ರಪ್ಪ ಅರಿಶಿಷಣದ, ಪುಟ್ಟಪ್ಪ ಬೆಳಗಟ್ಟಿ, ಮುತ್ತಣ್ಣ ತೋಟದ, ಶಂಕರ ಮರಾಟೆ, ತಿಮ್ಮರೆಡ್ಡಿ ಮರಡ್ಡಿ, ಮೋಹನ ಗುತ್ತೆಮ್ಮನವರ, ಬಸವಲಿಂಗಪ್ಪ ಅಂಗಡಿ, ಅಶೋಕ ಕಪ್ಪಲಿ, ರವಿ ಭಜಂತ್ರಿ, ಬೀರಪ್ಪ ಬೆಳಗಟ್ಟಿ ಬಸವರಾಜ ಇಚ್ಚಂಗಿ, ಹನುಮಂತಪ್ಪ ಬೆಳಗಟ್ಟಿ, ಸಿದ್ದಪ್ಪ ಗುಡೇದ, ತಿಪ್ಪಣ್ಣ ಅಗಳಿ, ಶಿವಪ್ಪ ಅರಸಿ, ಸಿಡಿಪಿಓ ಮೃತ್ಯುಂಜಯ ಗುಡ್ಡದಾನ್ವೇರಿ, ನಿರ್ಮಿತಿ ಕೇಂದ್ರದ ಎಇ ವಿಜಯ ಯಳಮಲಿ, ಶರಣಪ್ಪ ತಳವಾರ ಮುಂತಾದವರು ಉಪಸ್ಥಿತರಿದ್ದರು.

## ಅಕ್ಕನ ಬಳಗದಲ್ಲಿ ಘಟ ಸ್ಥಾಪನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಅಕ್ಕನ ಬಳಗದಲ್ಲಿ ನವರಾತ್ರಿ ಹಬ್ಬದ ನಿಮಿತ್ತ ಸಂಭ್ರಮದಿಂದ ದೇವಿಯ ಘಟಸ್ಥಾಪನಾ ಕಾರ್ಯಕ್ರಮ ನೆರವೇರಿಸಲಾಯಿತು. ಪೂಜಾ ಸಮಾರಂಭದ ಭಕ್ತಿ ಸೇವೆಯನ್ನು ರೇಣುಕಾ ಲಿಂಗರಾಜ ಅಮಾತ್ಯ ವಹಿಸಿಕೊಂಡಿದ್ದರು. ಅಧ್ಯಕ್ಷರಾದ ಜಯಶ್ರೀ ಉಮೇಶ ಹುಬ್ಬಳ್ಳಿ, ಕಾರ್ಯದರ್ಶಿಗಳಾದ ಜಯಶ್ರೀ ತಾತನಗೌಡ ಪಾಟೀಲ, ಕೋಶಾಧ್ಯಕ್ಷರಾದ ಶೀವಲೀಲಾ ಹಿರೇಮಠ, ಉಪಾಧ್ಯಕ್ಷರಾದ ಕಸ್ತೂರಿ ಹಿರೇಗೌಡರ ಅವರು ಉಪಸ್ಥಿತರಿದ್ದು ಪೂಜಾ ಕಾರ್ಯಕ್ರಮ ನೆರವೇರಿಸಿದರು.

ಹಿರಿಯ ಟ್ರಸ್ಟಿಗಳಾದ ನಾಗರತ್ನಾ ಹುಬ್ಬಳ್ಳಿಮಠ, ಅನ್ನಪೂರ್ಣ ಮಾಳೆಕೊಪ್ಪಮಠ, ಲಲಿತಾ ಬಾಳಿಹಳ್ಳಿಮಠ, ಶಾರದಾ ಹಿರೇಮಠ, ಮೀನಾಕ್ಷಿ ಸಜ್ಜನರ, ರೇಖಾ ಶಿಗ್ಲಿಮಠ, ಉಷಾ ಧಡೂತಿ, ಶಿವಲೀಲಾ ಕುರಡಗಿ, ಸುವರ್ಣ ವಸ್ತ್ರದ, ಸುವರ್ಣ ಹೊಸಂಗಡಿ, ಶಾರದಾ ಬೊಮ್ಮಸಾಗರ, ರಾಜೇಶ್ವರಿ ಶೆಟ್ಟರ, ಪಾರ್ವತಿ ಶಾಬಾದಿಮಠ, ಶಿವಲೀಲಾ ಅಕ್ಕಿ, ಶೈಲಜಾ ನಾಲ್ವಾಡ, ವೀಣಾ ಮಾನ್ವಿ, ನಾಗರತ್ನ ಮಾರನಬಸರಿ, ಪ್ರಭಾವತಿ ಯಳಮಲಿ, ಗೀತಾ ಬಸರಿಗಿಡದ, ಮಂಗಳಾ ನಾಲತ್ವಾಡಮಠ, ಲಲಿತಾ ಮುತ್ತಿನಪೆಂಡಿಮಠ, ಉಮಾ ಲಕ್ಷ್ಮೇಶ್ವರಮಠ, ಜಯಶ್ರೀ ಬಾಳಿಹಳ್ಳಿಮಠ, ವಿಜಯಲಕ್ಷ್ಮೀ ಮಾನ್ವಿ, ಅನುಪಮಾ ಜೋಳದ, ಮುದಗಣ್ಣವರ, ವಿಜಯಲಕ್ಷ್ಮೀ ಚಿತ್ತರಗಿ, ಉಮಾದೇವಿ ಚಿತ್ತರಗಿ ಮುಂತಾದವರಿದ್ದರು.

## ಎನ್‌ಎಸ್‌ಎಸ್‌ನಿಂದ ಸೇವಾ ಮನೋಭಾವ ವೃದ್ಧಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿದ್ಯಾರ್ಥಿಗಳಲ್ಲಿ ಶಿಸ್ತು, ಶ್ರದ್ಧೆ, ಪ್ರಾಮಾಣಿಕ ಪ್ರಯತ್ನ, ಸಹಬಾಳ್ವೆ, ಸೇವಾ ಮನೋಭಾವನೆ, ಭ್ರಾತೃತ್ವ ಭಾವನೆ ಬೆಳೆಸಿಕೊಳ್ಳಲು ವಿದ್ಯಾರ್ಥಿಗಳಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಅತ್ಯವಶ್ಯವಾಗಿದೆ ಎಂದು ಅಗಡಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಚಾರ್ಯ ಡಾ. ಪರಶುರಾಮ ಬಾರ್ಕಿ ಅಭಿಪ್ರಾಯಪಟ್ಟರು.

ಅವರು ಶನಿವಾರ ರಾಷ್ಟ್ರೀಯ ಸೇವಾ ಯೋಜನೆ ದಿನಾಚರಣೆ ಅಂಗವಾಗಿ ಮಹಾವಿದ್ಯಾಲಯದ ಎನ್‌ಎಸ್‌ಎಸ್ ಘಟಕದ ವತಿಯಿಂದ ಆಯೋಜಿಸಲಾಗಿದ್ದ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಜನ್ಮ ಶತಮಾನೋತ್ಸವದ ಅಂಗವಾಗಿ ವಿಶ್ವ ವಿದ್ಯಾಲಯ, ಶಾಲಾ-ಕಾಲೇಜುಗಳಲ್ಲಿ ಪ್ರಾರಂಭಿಸಿದ ಎನ್‌ಎಸ್‌ಎಸ್ ಘಟಕಗಳಲ್ಲಿ ಇಂದು ಲಕ್ಷಾಂತರ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳುತ್ತಿದ್ದಾರೆ. ಎನ್‌ಎಸ್‌ಎಸ್ ಸೇವಾ ಮನೋಭಾವನೆಯನ್ನು ಬೆಳೆಸುವದರ ಜೊತೆಗೆ ವೇಳೆಯ ಮಹತ್ವ, ಪರಸ್ಪರ ಸಹಾಯ-ಸಹಕಾರದ ಗುಣಗಳನ್ನು ಬೆಳೆಸಿಕೊಳ್ಳುವಂತೆ ಮಾಡುತ್ತದೆ. ಈ ನಿಟ್ಟಿನಲ್ಲಿ ಕಾಲೇಜಿನಲ್ಲಿ ಎನ್‌ಎಸ್‌ಎಸ್ ಘಟಕದಿಂದ ಅನೇಕ ಹಳ್ಳಿಗಳಲ್ಲಿ ಹಾಗೂ ಸ್ಥಳೀಯವಾಗಿ ಸ್ವಚ್ಛತೆ, ಪರಿಸರ ಕಲ್ಪನೆ, ದುಶ್ಚಟಗಳಿಂದ ಆಗುವ ಕೆಟ್ಟ ಪರಿಣಾಮಗಳು, ಆರೋಗ್ಯ ಶಿಬಿರ ಸೇರಿದಂತೆ ಹತ್ತು ಹಲವಾರು ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದು, ವಿದ್ಯಾರ್ಥಿಗಳು ಇದರಲ್ಲಿ ಪ್ರಾಮಾಣಿಕತೆಯಿಂದ ಕಾರ್ಯ ಮಾಡುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಎನ್‌ಎಸ್‌ಎಸ್ ಸೇರಲು ಮುಂದಾಗಿ ಎಂದು ಕರೆ ನೀಡಿದರು.



ಶನಿವಾರ ಸೇವಾ ದಿನಾಚರಣೆ ಅಂಗವಾಗಿ ಬೆಳಿಗ್ಗೆ ಕಾಲೇಜಿನ ಆವರಣದಲ್ಲಿ ಎನ್‌ಎಸ್‌ಎಸ್ ಧ್ವಜಾರೋಹಣ ನೆರವೇರಿಸಲಾಯಿತು. ಆವರಣದಲ್ಲಿ ಸಸಿಗಳನ್ನು ನೆಡಲಾಯಿತಲ್ಲದೇ ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಉದ್ಯಾನವನದ ಸಿಬ್ಬಂದಿ ವರ್ಗಕ್ಕೆ ಟಿ-ಶರ್ಟ್ ವಿತರಣೆ ಮಾಡಿದರು.

ಈ ಸಂದರ್ಭದಲ್ಲಿ ಮುಖ್ಯ ಆಡಳಿತಾಧಿಕಾರಿ ಪ್ರೊ. ವಿಕ್ರಂ ಶಿರೋಳ, ಎನ್‌ಎಸ್‌ಎಸ್ ಅಧಿಕಾರಿ ಪ್ರೊ. ಸೋಮಶೇಖರ ಕೆರಿಮನಿ, ಪ್ರೊ. ಷಣ್ಮುಖ, ಪ್ರೊ. ಕಿರಣ ಕೋತಿನ, ಪ್ರೊ. ಮಂಜುನಾಥ, ಪ್ರೊ. ಸೋಮಶೇಖರ ನವಲಗುಂದ, ಪ್ರೊ. ರವಿ ದುರಗಣ್ಣವರ, ಪ್ರೊ. ಅನಿಲ ನಾರಾಯಣಪುರ, ರಮೇಶರೆಡ್ಡಿ ಮುಂತಾದವರು ಇದ್ದರು.

### ಸ್ವಚ್ಛತಾ ಹೀ ಸೇವಾ ಅಭಿಯಾನದಡಿ 'ಒಂದು ದಿನ, ಒಂದು ಗಂಟೆ ಎಲ್ಲರೂ ಒಟ್ಟಿಗೆ'

## ಸ್ವಚ್ಛತೆಗೆ ಆದ್ಯತೆ ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಚನ್ನಮ್ಮ ಸರ್ಕಲ್‌ನಿಂದ ಶ್ರೀ ಮಹರ್ಷಿ ವಾಲ್ಮೀಕಿ ವೃತ್ತದವರೆಗೂ 'ಸ್ವಚ್ಛತಾ ಹೀ ಸೇವಾ' ಅಭಿಯಾನದಡಿ ಸಾಮೂಹಿಕ ಸ್ವಚ್ಛತಾ ಶ್ರಮದಾನಕ್ಕೆ ಗುರುವಾರ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿಗಳು, ಸ್ವಚ್ಛೋತ್ಸವ ಎಂಬ ಶೀರ್ಷಿಕೆಯಡಿ ನಗರದಲ್ಲಿ ಚನ್ನಮ್ಮ ಸರ್ಕಲ್‌ನಿಂದ ಶ್ರೀ



ಮಹರ್ಷಿ ವಾಲ್ಮೀಕಿ ವೃತ್ತದವರೆಗಷ್ಟೇ ಸಿಮಿತವಾಗದೆ ನಗರದಲ್ಲಿ ಪ್ರತಿಯೊಂದು ವಾರ್ಡ್‌ಗಳಿಗೂ 'ಸ್ವಚ್ಛತಾ ಹೀ ಸೇವಾ' ಅಭಿಯಾನ ಹರಡಲಿ. ಗದಗದಲ್ಲಿ ಮಾದರಿಯಾಗುವಂತೆ ಪೌರಕಾರ್ಮಿಕರು ಮತ್ತು ಸ್ಥಳೀಯರು ಸಹಕರಿಸಿ ಸ್ವಚ್ಛವಾಗಿರಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಸ್ವಚ್ಛಮೇವ ಜಯತೇ ಎನ್ನುವ ಉಕ್ತಿಯಂತೆ ನಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಂಡರೆ ಪ್ರತಿಯೊಬ್ಬರೂ ಆರೋಗ್ಯಕರ ಜೀವನ ನಡೆಸಲು ಸಾಧ್ಯ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ್ರ ಕೋಟೂರ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ನಂದಾ ಹಣಬರಟ್ಟಿ, ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತ ರಾಜಾರಾಮ್ ಎನ್.ಪವಾರ, ನಗರಸಭೆ ಪರಿಸರ ಅಭಿಯಂತರ ಆನಂದ್ ಬದಿ, ನಗರಸಭೆ ಸಾಹಾಯಕ ಕಾರ್ಯಪಾಲಕ ಅಭಿಯಂತರ ಎಚ್.ಎ. ಬಂಡಿವಡ್ಡರ, ನಗರಸಭೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು, ಪೌರ ಕಾರ್ಮಿಕರು, ಎನ್.ಎಸ್.ಎಸ್ ಎನ್‌ಸಿಸಿ ವಿದ್ಯಾರ್ಥಿಗಳು, ಸಂಘ-ಸಂಸ್ಥೆಯವರು, ವಿದ್ಯಾರ್ಥಿಗಳು ಹಾಜರಿದ್ದರು.

## ಏಕಾಏಕಿ ಕುಸಿದ ಛಾವಣಿ: ಟೀ ಕುಡಿಯಲು ಹೋದ ವೃದ್ಧೆ ಸಾವು

■ ವಿಜಯಸಾಕ್ಷಿ ಸುದ್ದಿ, ರಾಯಚೂರು

ರಾಯಚೂರು ಗಂಜ್ ವೃತ್ತದ ಬಳಿ ಟೀ ಕುಡಿಯಲು ಅಂಗಡಿಗೆ ತೆರಳಿದ್ದಾಗ ಪಕ್ಕದ ಮನೆ ಛಾವಣಿ ಹಾಗೂ ಗೋಡೆ ಕುಸಿದು ವೃದ್ಧೆಯೊಬ್ಬರು ಸಾವನ್ನಪ್ಪಿರುವ ಘಟನೆ ಜರುಗಿದೆ.

60 ವರ್ಷದ ಈಶಮ್ಮ ಮೃತ ವೃದ್ಧೆ. ಇವರು ಎಲ್‌ಬಿಎಸ್ ನಗರದ ನಿವಾಸಿ ಎನ್ನಲಾಗಿದೆ. ಮೃತ ಈಶಮ್ಮ ಟೀ ಕುಡಿಯಲು ಅಂಗಡಿಗೆ ತೆರಳಿದ್ದರು. ಈ ವೇಳೆ ಏಕಾಏಕಿ ಟೀ ಅಂಗಡಿಯ ಪಕ್ಕದ ಮನೆ ಛಾವಣಿ, ಗೋಡೆ ಕುಸಿದು ಬಿದ್ದಿದೆ. ಪರಿಣಾಮ ಈಶಮ್ಮ ಸ್ಥಳದಲ್ಲೇ ಸಾವನ್ನಪ್ಪಿದ್ದು, ಇನ್ನಿಬ್ಬರು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಘಟನೆ ಸಂಬಂಧ ಮಾರ್ಕೆಟ್ ಯಾರ್ಡ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka